ಸಂಪುಟ : 10 ಸಂಚಿಕೆ: 165 ಪುಟ : 4+2 ಬೆಲೆ: 3.00 ಬುಧವಾರ ಆಗಸ್ಟ್ 06 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 165 Pages : 4+2 Price : 3.00 Wednesday August 06 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವಾಲಯದ Dharti Aaba Janjatiya Gram Utkarsh Abhiyan ( DA - JGUA) ಯೋಜನೆಯಡಿ ಗುರುತಿಸಿರುವ ಬುಡಕಟ್ಟು ಗ್ರಾಮಗಳಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಹೋಂ ಸ್ಟೇ ಸ್ಥಾಪಿಸಲು ರೂ. 5.00 ಲಕ್ಷಗಳ ಸಹಾಯಧನವನ್ನು ಹಾಗೂ ಹೋಂ ಸ್ಟೇ ನವೀಕರಿಸಲು ರೂ. 3.00 ಲಕ್ಷಗಳ ಸಹಾಯಧನವನ್ನು ನೀಡುವ ಸಂಬಂಧ ಪ್ರವಾಸೋದ್ಯಮ ಇಲಾಖೆಯಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನವನ್ನು ಆಗಸ್ಟ್ 11 ರವರೆಗೆ ವಿಸ್ತರಿಸಲಾಗಿದೆ.

ಅರ್ಜಿದಾರರು ಹೊಂದಿರಬೇಕಾದ ಅರ್ಹತೆಗಳು: ಅರ್ಜಿದಾರರು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು.

ಗದಗ ಜಿಲ್ಲೆಯಿಂದ ಧರ್ತಿ ಅಬಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಕಾರ್ಯಕ್ರಮದ ಅಡಿ ಅಥವಾ ಅದರ ಅಕ್ಕಪಕ್ಕದ ಗ್ರಾಮದ ನಿವಾಸಿಯಾಗಿರಬೇಕು.

**ಯೋಜನೆಯಡಿ ಆಯ್ಕೆಯಾದ ಗ್ರಾಮಗಳ ವಿವರ :** ಗದಗ ಜಿಲ್ಲೆಯ ರೋಣ ತಾಲೂಕು ಅಸೂಟಿ ಗ್ರಾಮ ಪಂಚಾಯತಿಯ ಮೇಲ್ಮಠ ಗ್ರಾಮ, ಲಕ್ಷೇಶ್ವರ ತಾಲೂಕಿನ ಗೋವನಾಳ ಗ್ರಾಮ ಪಂಚಾಯತಿಯ ಒಡೆಯರ ಮಲ್ಲಾಪೂರ ಗ್ರಾಮ, ಶಿರಹಟ್ಟಿ ತಾಲೂಕಿನ ಮಾಚೇನಹಳ್ಳಿ ಗ್ರಾಮ ಪಂಚಾಯತಿಯ ಭಾವನೂರ ಗ್ರಾಮ, ಮುಂಡರಗಿ ತಾಲೂಕಿನ ಹಾರೋಗೇರಿ ಗ್ರಾಮ ಪಂಚಾಯತಿಯ ಕೆಲೂರು ಗ್ರಾಮ.

**ಅರ್ಜಿದಾರರು ಸಲ್ಲಿಸಬೇಕಾದ ದಾಖಲೆಗಳು:** ಜಾತಿ ಪ್ರಮಾಣಪತ್ರ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಮನೆ/ ನಿವೇಶನ ದಾಖಲೆ, ಮನೆಯ ಫೋಟೋ, ಗ್ರಾಮ ಪಂಚಾಯತಿಯಿಂದ ಎನ್.ಓ.ಸಿ.. ವಾಸ ಸ್ಥಳ ಪ್ರಮಾಣ ಪತ್ರ ಹಾಗೂ ಎಸ್ಟಿಮೇಟ್ ಕಾಪಿ.

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:** ಸಹಾಯಕ ನಿರ್ದೇಶಕರ ಕಚೇರಿ ಪ್ರವಾಸೋದ್ಯಮ ಇಲಾಖೆ, ಎ.ಸಿ.ಕಚೇರಿ ಕಟ್ಟಡ – 08372–233017, 9945255861, 9916164422.

ಕೆಎಸ್‌ಆರ್‌ಟಿಸಿ ನೌಕರರ ಮುಷ್ಕರ । ರಸ್ತೆಗಿಳಿದ ಖಾಸಗಿ ವಾಹನಗಳು । ಸಂಜೆಯ ಹೊತ್ತಿಗೆ ಮುಷ್ಕರ ಅಂತ್ಯ

# ಪ್ರಯಾಣಿಕರಿಗೆ ತಟ್ಟಿದ ಮುಷ್ಕರದ ಬಿಸಿ




■ ವಿಜಯಸಾಕ್ಷಿ ಸುದ್ದಿ, ಗದಗ

ಸಾರಿಗೆ ಸಂಸ್ಥೆಯ ನೌಕರರ ಹಿಂಬಾಕಿ ವೇತನ ಪಾವತಿ, ವೇತನ ಪರಿಷ್ಕರಣೆ, ಅಮಾನತುಗೊಂಡ ನೌಕರರ ಮರು ನೇಮಕ ಸೇರಿ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ರಾಜ್ಯದಾದ್ಯಂತ ಸಾರಿಗೆ ನೌಕರರು ಮಂಗಳವಾರ ಮುಷ್ಕರ ನಡೆಸಿದ್ದು, ಬಂದ್ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯಲ್ಲಿ ಸರ್ಕಾರಿ ಬಸ್ ಸಂಚಾರ ಸಂಪೂರ್ಣ ಸ್ತಬ್ಧವಾಗಿತ್ತು. ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗದ ಪರಿಣಾಮ ಸಾರಿಗೆ ಬಸ್‌ಗಳು ರಸ್ತೆಗೆ ಇಳಿಯಲಿಲ್ಲ. ಮುಷ್ಕರಕ್ಕೆ ಜಿಲ್ಲೆಯ 2319 ಸಾರಿಗೆ ನೌಕರರ ಬೆಂಬಲ ವ್ಯಕ್ತವಾಯಿತು. ಜಿಲ್ಲೆಯಾದ್ಯಂತ 561 ಶೆಡ್ಯೂಲ್, 584 ಬಸ್‌ಗಳ ಕಾರ್ಯಾಚರಣೆ ಸ್ಥಗಿತವಾಗಿತ್ತು. ಪರ್ಯಾಯವಾಗಿ ಜಿಲ್ಲಾಡಳಿತದಿಂದ 276 ಖಾಸಗಿ ವಾಹನಗಳ ವ್ಯವಸ್ಥೆ ಮಾಡಲಾಗಿತ್ತು. ಇದನ್ನೇ ಬಂಡವಾಳವನ್ನಾಗಿಸಿಕೊಂಡ ಖಾಸಗಿ ವಾಹನ ಚಾಲಕರು ದುಪ್ಪಟ್ಟು ದರ ವಿಧಿಸಿ ಪ್ರಯಾಣಿಕರ ಜೇಬಿಗೆ ಕತ್ತರಿ ಹಾಕಿದ್ದಾರೆ. ಗದಗ ನಗರದ ಬಸ್ ನಿಲ್ದಾಣದ ಬಳಿ ಖಾಸಗಿ ವಾಹನಗಳಿಂದ ಹೆಚ್ಚಿನ ಹಣ ವಸೂಲಿ ಮಾಡಲಾಗುತ್ತಿದೆ ಎಂದು ಪ್ರಯಾಣಿಕರು ಆಕ್ರೋಶ ವ್ಯಕ್ತಪಡಿಸಿದರು. ಗದಗದಿಂದ ಮುಂಡರಗಿ ಪಟ್ಟಣಕ್ಕೆ ಸಾರಿಗೆ ದರ 58 ರೂ ಇದ್ದರೆ, ಖಾಸಗಿ ವಾಹನದವರು 100 ರೂ ವಸೂಲಿ ಮಾಡುತ್ತಿದ್ದಾರೆ ಎಂದು ಪ್ರಯಾಣಿಕರು ಅಸಮಾಧಾನ ಹೊರಹಾಕಿದರು.

ಗದಗ ಜಿಲ್ಲೆಯ ಬೇರೆ ಬೇರೆ ತಾಲೂಕುಗಳಿಗೆ ಟೆಂಪೋ ವಾಹನ ಸಂಚಾರ ಮಾಡುತ್ತಿದ್ದು, ಕೆಎಸ್‌ಆರ್‌ಟಿಸಿ ಬಸ್‌ಗಳಿಲ್ಲದೇ ಪ್ರಯಾಣಿಕರು ಪರದಾಡಿದರು. ಗುಲ್ಬರ್ಗಾದಿಂದ ನಸುಕಿನ ಜಾವ 4 ಗಂಟೆಗೆ ಎನ್‌ಸಿಸಿ ವಿದ್ಯಾರ್ಥಿನಿಯರು

▸▸ 3ನೇ ಪುಟಕ್ಕೆ

### ಮುಷ್ಕರ ವಾಪಸ್

ಸಾರಿಗೆ ನೌಕರರ ಮುಷ್ಕರಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಆದೇಶವನ್ನೂ ಲೆಕ್ಕಿಸದೆ ಮುಷ್ಕರ ನಡೆಸಿರುವುದಕ್ಕೆ ಹೈಕೋರ್ಟ್ ತೀವ್ರ ತರಾಟೆಗೆ ತೆಗೆದುಕೊಂಡಿದ್ದು, ನ್ಯಾಯಾಂಗ ನಿಂದನೆ ಪ್ರಕರಣ ದಾಖಲಿಸುವ ಎಚ್ಚರಿಕೆ ನೀಡಿದ ಬೆನ್ನಲ್ಲೇ ಸಾರಿಗೆ ಸಂಘಟನೆಗಳು ಮುಷ್ಕರವನ್ನು ಹಿಂಪಡೆದಿವೆ. ಈ ವಿಚಾರವಾಗಿ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಅನಂತ ಸುಬ್ಬರಾವ್, ಸದ್ಯಕ್ಕೆ ಮುಷ್ಕರ ವಾಪಸ್ ತೆಗೆದುಕೊಳ್ಳಲಾಗಿದೆ. ಸಾರಿಗೆ ನೌಕರರು ಈ ಕ್ಷಣದಿಂದಲೇ ಕೆಲಸಕ್ಕೆ ಹಾಜಾರಾಗಿ ಎಂದು ಸೂಚನೆ ನೀಡಿದರು.

### ಬಸ್ ಸಂಚಾರ ಆರಂಭ

ಸಾರಿಗೆ ನೌಕರರ ಮುಷ್ಕರಕ್ಕೆ ಹೈಕೋರ್ಟ್ ಎಚ್ಚರಿಕೆ ನೀಡಿದ ಬೆನ್ನಲ್ಲೇ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಮುಷ್ಕರವನ್ನು ತಾತ್ಕಾಲಿಕವಾಗಿ ಮುಂದೂಡಿ ಮುಷ್ಕರವನ್ನು ಹಿಂಪಡೆದಿದ್ದರಿಂದ ಸಂಜೆ 5ರ ನಂತರ ಜಿಲ್ಲೆ ಹಾಗೂ ಅಂತರ್ ಜಿಲ್ಲೆಗಳಿಗೆ ತೆರಳುವ ಬಸ್‌ಗಳ ಸಂಚಾರ ಆರಂಭಗೊಂಡವು.

## ಬೆಟಗೇರಿ; ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 110 ಕೆ.ವಿ ಟಿಸಿ ಬದಲಾವಣೆ ಕಾಮಗಾರಿ ಕೈಗೊಳ್ಳುವುದರಿಂದ ಆಗಸ್ಟ್ 7ರ ಮಧ್ಯಾಹ್ನ 2 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಸದರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಬ್ಯಾಟರಿ ಸೆಲ್ ಬದಲಾವಣೆ ಕಾಮಗಾರಿ ಕೈಗೊಳ್ಳುವುದರಿಂದ ಆಗಸ್ಟ್ 7ರಂದು ಮುಂಜಾನೆ 10:30 ಗಂಟೆಯಿಂದ ಮಧ್ಯಾಹ್ನ 3.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. 110 ಕೆವ್ಹಿ ಲಕ್ಷ್ಮೇಶ್ವರ ಉಪಕೇಂದ್ರದಿಂದ ಪೂರೈಕೆಯಾಗುವ 33 ಕೆವ್ಹಿ ಎಮ್.ಎಮ್.ಸಿ.ಎಲ್ ಗಾಳಿಯಂತ್ರ ಘಟಕ, 33 ಕೆವ್ಹಿ ಸೋಮೇಶ್ವರ ಸ್ಪಿನ್ನಿಂಗ್ ಮಿಲ್, ವಿನ್ನಾಲ್ ಸೋಲಾರ್, ಮವ್‌ಯಥೊ ಸೋಲಾರ್, ಎಲ್ಲಾ ನಗರ, ನೀರಾವರಿ ಪಂಪ್‌ಸೆಟ್ ಮತ್ತು ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ವಿನಂತಿಸಿದೆ.

ಜಿಲ್ಲಾ ಕ್ರೀಡಾಂಗಣಕ್ಕೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಭೇಟಿ, ಪರಿಶೀಲನೆ

# ಜಿಲ್ಲಾ ಕ್ರೀಡಾಂಗಣದ ಸ್ವಚ್ಛತೆಗೆ ಕ್ರಮ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಮಟ್ಟದಲ್ಲಿ ಆಗಸ್ಟ್ 15ರಂದು ಜರುಗುವ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮ ಜಿಲ್ಲಾ ಕ್ರೀಡಾಂಗಣದಲ್ಲಿ ವ್ಯವಸ್ಥಿತವಾಗಿ ಜರುಗುವಂತೆ ಸಂಬಂಧಿತ ಇಲಾಖಾಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣಕ್ಕೆ ಮಂಗಳವಾರ ಭೇಟಿ ನೀಡಿದ ಅವರು ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದ ವೇದಿಕೆ ಹಾಗೂ ಇತರೆ ವ್ಯವಸ್ಥೆಗಳ ಕುರಿತು ಪರಿಶೀಲನೆ ನಡೆಸಿ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಆ.15ರಂದು ಬೆಳಿಗ್ಗೆ 9 ಗಂಟೆಗೆ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಸ್ವಾತಂತ್ರ್ಯೋತ್ಸವದ ಸಂದೇಶ ನೀಡುವರು. ಬೆಳಿಗ್ಗೆ 8.30ರೊಳಗಾಗಿ ವಿವಿಧ ಇಲಾಖಾ ಅಧಿಕಾರಿಗಳು ತಮ್ಮ ಕಚೇರಿಯಲ್ಲಿ ಧ್ವಜಾರೋಹಣ ನೆರವೇರಿಸಿ ಕ್ರೀಡಾಂಗಣದಲ್ಲಿ ತಮ್ಮ ಇಲಾಖಾ ಸಿಬ್ಬಂದಿಗಳೊಂದಿಗೆ ಹಾಜರಿರಬೇಕು. ಅಲ್ಲದೇ ಶಾಲಾ–ಕಾಲೇಜುಗಳಲ್ಲಿಯೂ ಮಕ್ಕಳು ಧ್ವಜಾರೋಹಣ ನೆರವೇರಿಸಿ 8.30ರೊಳಗಾಗಿ ಜಿಲ್ಲಾ



ಕ್ರೀಡಾಂಗಣಕ್ಕೆ ಆಗಮಿಸಿ ನಿಗದಿಪಡಿಸಿದ ಸ್ಥಳದಲ್ಲಿ ಆಸೀನರಾಗಬೇಕು. ಈ ಕುರಿತು ಶಾಲಾ ಶಿಕ್ಷಕರು ಶಿಕ್ಷಣ ಇಲಾಖೆ ಅಧಿಕಾರಿಗಳು ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಆ. 15ಕ್ಕೂ ಮೊದಲು ಮೂರು ದಿನ ಮುಂಚಿತವಾಗಿಯೇ ನಗರಸಭೆಯ ಅಧಿಕಾರಿಗಳು ನಗರದ ಪ್ರಮುಖ ವೃತ್ತಗಳ ಸ್ವಚ್ಛತೆಗೆ ಹಾಗೂ ಜಿಲ್ಲಾ ಕ್ರೀಡಾಂಗಣದ ಸ್ವಚ್ಛತೆಗೆ ಆದ್ಯತೆ ವಹಿಸಬೇಕು. ಪ್ರಮುಖ ವೃತ್ತಗಳಲ್ಲಿ ಮುಂಚಿತವಾಗಿಯೇ ದೀಪಾಲಂಕಾರ ಮಾಡಬೇಕು ಎಂದು ಸೂಚಿಸಿದರು.

ವೇದಿಕೆಯಲ್ಲಿ ಶಿಷ್ಟಾಚಾರದಂತೆ ಕಾರ್ಯಕ್ರಮ ನಿರ್ವಹಣೆಯಾಗಬೇಕು. ಸೂಕ್ತ ಧ್ವನಿವರ್ಧಕದ ವ್ಯವಸ್ಥೆ ಮಾಡಬೇಕು. ಮಕ್ಕಳಿಗೆ ಅಲ್ಲಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಪ್ರತಿ ಕಾರ್ಯಕ್ರಮಗಳೂ ನಿಗದಿಪಡಿಸಿದ ಸಮಯಕ್ಕೆ ಜರುಗುವಂತೆ ನಿಗಾ ವಹಿಸಬೇಕು ಎಂದು ಸೂಚಿಸಿದರು.

ಶಾಲಾ ಶಿಕ್ಷಣ ಇಲಾಖೆ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆ ಅಧಿಕಾರಿಗಳು ನಗರ ವ್ಯಾಪ್ತಿಯ ಶಾಲಾ–ಕಾಲೇಜು ವಿದ್ಯಾರ್ಥಿಗಳನ್ನು ನಿಗದಿತ ಸಮಯದೊಳಗೆ ಕರೆತರುವ ವ್ಯವಸ್ಥೆ ಮಾಡಬೇಕು. ಈ ಕುರಿತಂತೆ ತಮ್ಮ ಇಲಾಖಾ ವ್ಯಾಪ್ತಿಯ ಅಧಿಕಾರಿ ಹಾಗೂ ಶಿಕ್ಷಕರುಗಳಿಗೆ ಹೊಣೆಗಾರಿಕೆ ನೀಡಬೇಕು. ಕಾರ್ಯಕ್ರಮ ಪೂರ್ಣಗೊಳ್ಳುವವರೆಗೆ ಶಾಲಾ–ಕಾಲೇಜು ವಿದ್ಯಾರ್ಥಿಗಳು ತೆರಳದಂತೆ ನಿಗಾ ವಹಿಸಬೇಕು ಎಂದು ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ಈ ಸಂದರ್ಭದಲ್ಲಿ ಪ.ಪೂ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಜಿಲ್ಲಾ ಉಪಸಮನ್ವಯಾಧಿಕಾರಿ ಎಮ್.ಎಚ್. ಕಂಬ್ಳಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ವಿ.ವಿ. ನಡುವಿನಮನಿ, ಶೆಟ್ಟೆಪ್ಪನವರ, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಕುಮಾರ್ ಸೋಪಡ್ಲಾ, ಕಂದಾಯ ನಿರೀಕ್ಷಕ ಭಜಂತ್ರಿ ಸೇರಿದಂತೆ ಇತರರು ಹಾಜರಿದ್ದರು.

## ಸಾರಿಗೆ ನೌಕರರ ಮುಷ್ಕರ: ಪ್ರಯಾಣಿಕರ ಪರದಾಟ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಎಸ್‌ಆರ್‌ಟಿಸಿ ಸಿಬ್ಬಂದಿಗಳು ಮಂಗಳವಾರ ರಾಜ್ಯಾದ್ಯಂತ ಕೈಗೊಂಡ ಮುಷ್ಕರದ ಬಿಸಿ ತಾಲೂಕಿಗೂ ತಟ್ಟಿದ್ದು, ಬಸ್ ಸಂಚಾರ ಸಂಪೂರ್ಣ ಸ್ಥಗಿತಗೊಂಡಿದ್ದರಿಂದ ವಿದ್ಯಾರ್ಥಿಗಳು, ಪ್ರಯಾಣಿಕರು ದಿನವಿಡೀ ಪರದಾಡಿದರು. ಹುಬ್ಬಳ್ಳಿ, ಹಾವೇರಿ ಮತ್ತು ಗದಗ ಕಡೆ ಲಕ್ಷ್ಮೇಶ್ವರದ ಬಸ್‌ಗಳು ಸಂಚರಿಸಲಿಲ್ಲ.

ಇದರಿಂದಾಗಿ ವೃದ್ಧರು, ಮಹಿಳೆಯರು, ವಿದ್ಯಾರ್ಥಿಗಳು ಸಂಕಷ್ಟ ಎದುರಿಸುವಂತಾಯಿತು.

ಮುಷ್ಕರದ ಹಿನ್ನೆಲೆಯಲ್ಲಿ ಚಾಲಕ–ನಿರ್ವಾಹಕರ ಸಮೂಹ ಕರ್ತವ್ಯದಿಂದ ಹೊರಗುಳಿದು ಹೋರಾಟಕ್ಕೆ ಬೆಂಬಲ ಸೂಚಿಸಿದರು. ಸಾರಿಗೆ ಮುಷ್ಕರದ ಅರಿವಿಲ್ಲದೆ ಪಟ್ಟಣದ ಬಸ್ ನಿಲ್ದಾಣಕ್ಕೆ ಆಗಮಿಸಿದ ಪ್ರಯಾಣಿಕರು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಅತ್ತ ಶಾಲೆಗೂ ಹೋಗಲಾಗದೇ ಮರಳಿ ಊರಿಗೂ ಹೋಗಲಾಗದೇ ಸಂಕಷ್ಟಕ್ಕೊಳಗಾದರು. ನಮ್ಮನ್ನು ಊರಿಗಾದರೂ ಕಳಸಿ ಇಲ್ಲವೇ ಶಾಲೆಗಾದರೂ ಕಳಿಸಿ ಎಂದು ಪರಿತಪಿಸಿದರು.

ಲಕ್ಷ್ಮೇಶ್ವರ ಸಾರಿಗೆ ಘಟಕದ ವ್ಯವಸ್ಥಾಪಕಿ ಸವಿತಾ ಆದಿ ಡಿಪೋ ಹಾಗೂ ಬಸ್ ನಿಲ್ದಾಣಕ್ಕೆ ಬಂದು ನೌಕರರಿಗೆ ಸಮಸ್ಯೆ ಅರ್ಥೈಸಲು ಪ್ರಯತ್ನಿಸಿ ಕರ್ತವ್ಯಕ್ಕೆ ಹಾಜರಾಗುವಂತೆ ಮನವೊಲಿಸಿದರು. ಒ ಲ್ಲ ದ '

▸▸ 3ನೇ ಪುಟಕ್ಕೆ

ಈ ನಡುವೆ ಗ್ಯಾರಂಟಿ ಯೋಜನೆ ಪ್ರಾರಂಭವಾದಾಗಿನಿಂದ ಹೆಚ್ಚಿನ ಕೆಲಸವಿಲ್ಲದೇ ನಿಂತಿದ್ದ ಖಾಸಗಿ ವಾಹನಗಳು ರಸ್ತೆಗಿಳಿದಿದ್ದವು. ಒಂದಷ್ಟು ಹೆಚ್ಚಿನ ದರ ಪಡೆದರೂ ಗದಗ, ಹುಬ್ಬಳ್ಳಿ, ಯಲವಗಿ, ಗುತ್ತಲ, ಶಿರಹಟ್ಟಿ ಭಾಗಕ್ಕೆ ಹೋಗುವ ಪ್ರಯಾಣಿಕರಿಗೆ ತುಸು ಅನುಕೂಲವಾಗಿತ್ತು. ಮುಷ್ಕರದಿಂದಾಗಿ ವ್ಯಾಪಾರ–ವಹಿವಾಟಿನ ಮೇಲೂ ಪರಿಣಾಮ ಬೀರಿತ್ತು.

### ಮುಷ್ಕರ ವಾಪಸ್

**ಬೆಂಗಳೂರು:** ಸಾರಿಗೆ ನೌಕರರ ಮುಷ್ಕರಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಆದೇಶವನ್ನೂ ಲೆಕ್ಕಿಸದೆ ಮುಷ್ಕರ ನಡೆಸಿರುವುದಕ್ಕೆ ಹೈಕೋರ್ಟ್ ತೀವ್ರ ತರಾಟೆಗೆ ತೆಗೆದುಕೊಂಡಿದ್ದು, ನ್ಯಾಯಾಂಗ ನಿಂದನೆ ಪ್ರಕರಣ ದಾಖಲಿಸುವ ಎಚ್ಚರಿಕೆ ನೀಡಿದ ಬೆನ್ನಲ್ಲೇ ಸಾರಿಗೆ ಸಂಘಟನೆಗಳು ಮುಷ್ಕರವನ್ನು ಹಿಂಪಡೆದಿವೆ. ಈ ವಿಚಾರವಾಗಿ ಸುದ್ದಿಗೋಷ್ಠಿ ನಡೆಸಿದ ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಅನಂತ ಸುಬ್ಬರಾವ್, ಸದ್ಯಕ್ಕೆ ಮುಷ್ಕರ ವಾಪಸ್ ತೆಗೆದುಕೊಳ್ಳಲಾಗಿದೆ. ಸಾರಿಗೆ ನೌಕರರು ಈ ಕ್ಷಣದಿಂದಲೇ ಕೆಲಸಕ್ಕೆ ಹಾಜಾರಾಗಿ ಎಂದು ಸೂಚನೆ ನೀಡಿದರು. ತರುವಾಯ, ನಾಲ್ಕೂ ಸಾರಿಗೆ ನಿಗಮಗಳ ಬಸ್ ಸಂಚಾರವು ಪುನರಾರಂಭಗೊಂಡಿತು.



ಗಜೇಂದ್ರಗಡ ಪಟ್ಟೇದ ಅಂಚು ಸೀರೆಗೆ ಭೌಗೋಳಿಕ ಹಕ್ಕು ಸಾಮ್ಯ

# ಸಿಂದೂರ ಚೆಕ್ಸ್ ಸೀರೆ'ಗೆ ಪ್ರಶಸ್ತಿ




■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಗಜೇಂದ್ರಗಡ ಪಟ್ಟಣವು ಐತಿಹಾಸಿಕವಾಗಿ ಪರಿಶುದ್ಧ ಹತ್ತಿ ನೂಲಿನಿಂದ ತಯಾರಸಿದ ಪಟ್ಟೇದ ಅಂಚು ಸೀರೆಗಳ ಉತ್ಪಾದನೆಗೆ ಪ್ರಸಿದ್ಧಿ ಪಡೆದಿದೆ. ಈ ಪಟ್ಟೇದ ಅಂಚು ಸೀರೆಗೆ 2025ರಲ್ಲಿ ಭಾರತ ಸರ್ಕಾರದಿಂದ Geographical Indication Registry ಅಡಿ ಭೌಗೋಳಿಕ ಹಕ್ಕು ಸಾಮ್ಯ ಮಾನ್ಯತೆ ನೀಡಲಾಗಿದೆ. ಪ್ರಸ್ತುತ ಗಜೇಂದ್ರಗಡ ಪಟ್ಟಣದಲ್ಲಿ ಸುಮಾರು 400 ಕೈಮಗ್ಗಗಳು ಕಾರ್ಯನಿರ್ವಹಿಸುತ್ತಿದ್ದು, ಇದರಲ್ಲಿ ಸುಮಾರು 200 ಕೈಮಗ್ಗಗಳು ಪಟ್ಟೇದ ಅಂಚು ಸೀರೆಗಳ ಉತ್ಪಾದನೆ ಮಾಡುತ್ತಿವೆ.

ತೇಜಪ್ಪ ವಿ.ಚಿನ್ನೂರ ಇವರು ಸುಮಾರು 40 ವರ್ಷಗಳಿಂದ ಕೈಮಗ್ಗ ನೇಕಾರಿಕೆ ವೃತ್ತಿಯಲ್ಲಿ ತೊಡಗಿದ್ದಾರೆ. ಇವರು ದಿ ಗಜೇಂದ್ರಗಡ ನೇಕಾರರ ಸಹಕಾರಿ ಉತ್ಪಾದಕ ಸಂಘ ನಿ. ಗಜೇಂದ್ರಗಡ ಸಂಘದಿಂದ ಕಚ್ಚಾಮಾಲು ಪಡೆದು ನಿಯಮಿತವಾಗಿ ಪಟ್ಟೇದ ಅಂಚಿನ ಸೀರೆಗಳನ್ನು ಉತ್ಪಾದಿಸುತ್ತಿದ್ದಾರೆ. ಈ ನೇಕಾರರು ಪ್ರಸ್ತುತ ಪಟ್ಟದ ಅಂಚು ಸೀರೆಯ ತಯಾರಿಕೆಯಲ್ಲಿ ಉಪಯೋಗಿಸುವ ನೈಸರ್ಗಿಕ ಅಂಟಿನಿಂದ ತಯಾರಿಸಿದ ವಾರ್ಪಿನ ಮೇಲೆ ಕೊಂಡಿ ತಂತ್ರಜ್ಞಾನ ಹಾಗೂ ಬುಟ್ಟಾ ತಿರುಕಿ ಮಾಡಕೊಂಡು 'ಸಿಂದೂರ ಚೆಕ್ಸ್ ಸೀರೆ'ಯನ್ನು ತಯಾರಿಸಿದ್ದಾರೆ. ಸದರಿ ಸಿಂದೂರ ಚೆಕ್ಸ್ ಸೀರೆಗೆ 2025–26ನೇ ಸಾಲಿನ ಹತ್ತಿ ವಿಭಾಗದಲ್ಲಿ ರಾಜ್ಯ ಮಟ್ಟದ ಕೈಮಗ್ಗ ನೇಕಾರರ ಪ್ರಶಸ್ತಿ ದೊರೆತಿದೆ.

▸▸ 3ನೇ ಪುಟಕ್ಕೆ

### ಸಿಂದೂರ್ ಚೆಕ್ಸ ಸೀರೆಯ ವೈಶಿಷ್ಟ್ಯತೆ

ಒಂದು ಬದಿಯ ಸೆರಗನ್ನು ಘನ ಸೆರಗು ಮಾಡುವ ಸಲುವಾಗಿ ಎಳೆಗಳನ್ನು ಕೈಯಿಂದ ಕೆಚ್ಚಿ ವಾರ್ಪನ್ನು ಸಿದ್ಧಪಡಿಸಿಕೊಂಡು, ಸಿದ್ಧಪಡಿಸಿದ ಘನ ಸೆರಗಿನಲ್ಲಿ ಸಾಂಪ್ರದಾಯಕ ಕೊಂಡಿ ತಂತ್ರಜ್ಞಾನ ಉಪಯೋಗಿಸಿ ಪಾರಂಪರಿಕ ವಿನ್ಯಾಸಗಳನ್ನು ಸೃಷ್ಟಿಸಲಾಗಿದೆ. ಮಾತೃಭಾಷೆ 'ಕನ್ನಡ' ಎಂಬ ಅಕ್ಷರಗಳನ್ನು ಬುಟ್ಟಾ ತಿರುಕಿ ಮಾಡಿ ನೇಯಲಾಗಿದೆ. ಇನ್ನೊಂದು ಬದಿಯ ಸೆರಗಿನಲ್ಲಿ ಇತ್ತೀಚೆಗೆ ಭಾರತವು ನಡೆಸಿದ 'ಆಪರೇಷನ್ ಸಿಂದೂರ್' ಕಾರ್ಯಾಚರಣೆಯ ಹೆಮ್ಮೆಯ ಪ್ರತೀಕವಾಗಿ ಅಕ್ಷರಗಳನ್ನು ಬುಟ್ಟಾ ತಿರುಕಿ ಮಾಡಕೊಂಡು, ತ್ರಿವರ್ಣಗಳ ಯುದ್ಧ ವಿಮಾನಗಳನ್ನು ಕೊಂಡಿ ತಂತ್ರಜ್ಞಾನ ಉಪಯೋಗಿಸಿ ನೇಯಲಾಗಿದೆ. ಕೈಮಗ್ಗ ನೇಕಾರಿಕೆಯ ಉನ್ನತ ಮಟ್ಟದ ನೈಪುಣ್ಯತೆ ಹೊಂದಿದ ತೇಜಪ್ಪ ವಿ.ಚಿನ್ನೂರ ಸತತ 10 ದಿನಗಳ ಕಾಲ ಶ್ರಮವಹಿಸಿ ಈ ಉತ್ಪನ್ನವನ್ನು ತಯಾರಿಸಿದ್ದಾರೆ.

## ಸಂಪಾದಕೀಯ

# ಪರಿಶಿಷ್ಟ ಜಾತಿ ಒಳಮೀಸಲಾತಿ: ಸಾಮಾಜಿಕ ನ್ಯಾಯದ ಹೊಸ ದಾರಿ

ಪರಿಶಿಷ್ಟ ಜಾತಿಗಳಿಗೆ (SC) ಒಳಮೀಸಲಾತಿ ಕಲ್ಪಿಸುವ ಕುರಿತು ನ್ಯಾಯಮೂರ್ತಿ ನಾಗಮೋಹನ್ ದಾಸ್ ಸಮಿತಿ ಸರ್ಕಾರಕ್ಕೆ ಸಲ್ಲಿಸಿದ ವರದಿಯು ಸಾಮಾಜಿಕ ನ್ಯಾಯದ ದೃಷ್ಟಿಯಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ವರದಿಯು ದಶಕಗಳಿಂದ ಬಾಕಿ ಉಳಿದಿದ್ದ ಬಹುದೊಡ್ಡ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡಿದೆ.

ಸಮಿತಿಯು ಪರಿಶಿಷ್ಟ ಜಾತಿಯನ್ನು ಐದು ಗುಂಪುಗಳಾಗಿ ವರ್ಗೀಕರಿಸಿ, ಅವುಗಳ ಜನಸಂಖ್ಯೆ ಮತ್ತು ಸಾಮಾಜಿಕ-ಶೈಕ್ಷಣಿಕ ಸ್ಥಿತಿಗತಿಯ ಆಧಾರದ ಮೇಲೆ ಮೀಸಲಾತಿ ಹಂಚಿಕೆ ಮಾಡಿದೆ. ಈ ಕ್ರಮವು ಜಾತಿಗಳ ನಡುವಿನ ಆಂತರಿಕ ಅಸಮಾನತೆಗಳನ್ನು ನಿವಾರಿಸುವ ಗುರಿ ಹೊಂದಿದೆ.

ಆಯೋಗದ ವರದಿಯ ಪ್ರಮುಖ ಅಂಶಗಳ ಪ್ರಕಾರ, ಅತೀ ಹಿಂದುಳಿದ ಜಾತಿಗಳಿಗೆ ಶೇ 1ರಷ್ಟು ಮೀಸಲಾತಿ, ಎಡಗೈ ಜಾತಿಗಳಿಗೆ ಶೇ 6, ಬಲಗೈ ಜಾತಿಗಳಿಗೆ ಶೇ 5, ಬಂಜಾರ, ಬೋವಿ, ಕೊರಚ, ಕೊರಮ ಜಾತಿಗಳಿಗೆ ಶೇ 4 ಮತ್ತು ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಗುಂಪುಗಳಿಗೆ ಶೇ 1ರಷ್ಟು ಮೀಸಲಾತಿ ಹಂಚಿಕೆ ಮಾಡಿದೆ. ಈ ಹಂಚಿಕೆಯು ಹೆಚ್ಚು ಹಿಂದುಳಿದವರಿಗೆ ಆದ್ಯತೆ ನೀಡುವ ಮೂಲಕ, ಮೀಸಲಾತಿಯ ನಿಜವಾದ ಫಲವನ್ನು ತಲುಪಿಸಬೇಕಾದವರ ಕೈಗೆ ನೀಡುವ ಉದ್ದೇಶ ಹೊಂದಿದೆ.

ವರ್ಷಗಳಿಂದ ಮೀಸಲಾತಿಯ ಲಾಭ ಪಡೆಯಲು ವಿಫಲರಾದ ಸಣ್ಣ ಸಮುದಾಯಗಳಿಗೆ ಈ ವರದಿಯು ಹೊಸ ಭರವಸೆ ಮೂಡಿಸಿದೆ. ಆದರೆ, ಈ ವರದಿಯನ್ನು ಜಾರಿಗೆ ತರುವುದು ಸುಲಭದ ಕೆಲಸವಲ್ಲ. ಇದು ಸಮಾಜದ ವಿವಿಧ ಸ್ತರಗಳಲ್ಲಿ ಭಾರಿ ಚರ್ಚೆ ಮತ್ತು ಪ್ರತಿಭಟನೆಗಳಿಗೆ ಕಾರಣವಾಗಬಹುದು.

ಸರ್ಕಾರವು ಈ ವರದಿಯನ್ನು ಜಾರಿಗೆ ತರುವಾಗ ಎಲ್ಲಾ ಸಮುದಾಯಗಳ ಭಾವನೆಗಳನ್ನು ಗಣನೆಗೆ ತೆಗೆದುಕೊಂಡು, ಸಂವಿಧಾನಾತ್ಮಕವಾಗಿ ಮತ್ತು ಕಾನೂನಾತ್ಮಕವಾಗಿ ದೃಢವಾಗಿ ನಿಲ್ಲಬೇಕಾಗಿದೆ. ಒಳಮೀಸಲಾತಿ ಅನುಷ್ಠಾನದ ಮೂಲಕ ರಾಜ್ಯವು ನಿಜವಾದ ಸಾಮಾಜಿಕ ಸಮಾನತೆ ಮತ್ತು ಸಮಗ್ರ ಅಭಿವೃದ್ಧಿಯತ್ತ ಸಾಗಲು ಒಂದು ಸದವಕಾಶವನ್ನು ಪಡೆದಿದೆ. ಇದು ರಾಜಕೀಯ ಇಚ್ಛಾಶಕ್ತಿಯನ್ನು ಪರೀಕ್ಷಿಸುವ ಸಮಯವೂ ಹೌದು.

ಶ್ರಾವಣ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಂತೋಷ ನಾವು ಕಾಣುವ ದೃಷ್ಟಿಯಲ್ಲಿದೆ



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಸತ್ಯ, ಶಾಂತಿ ಎಲ್ಲರ ಬಾಳಿಗೆ ಅಗತ್ಯ. ಸತ್ಯ ಶುದ್ಧವಾದ ದಾರಿಯಲ್ಲಿ ನಡೆದಾಗ ಜೀವನ ಮೌಲ್ಯ ಸಂವರ್ಧಿಸುತ್ತದೆ. ಆದರ್ಶ ಸಮಾಜ ನಿರ್ಮಾಣಕ್ಕೆ ಮೌಲ್ಯಾಧಾರಿತ ಚಿಂತನೆಗಳು ದಾರಿದೀಪವೆಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರಾವಣ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಂತೋಷ ಅನ್ನುವುದು ಹಣ, ಆಸ್ತಿ-ಅಂತಸ್ತಿನಲ್ಲಿಲ್ಲ. ಸಂತೋಷ ನಾವು ಕಾಣುವ ದೃಷ್ಟಿಯಲ್ಲಿದೆ. ಎಲ್ಲಾ ಬಿದಿರುಗಳು ಕೊಳಲಾಗುವುದಿಲ್ಲ. ಕೆಲವರಿಗೆ ದೋಣಿಗಳಾಗುತ್ತವೆ. ಕೆಲವರಿಗೆ ಏಣಿಗಳಾಗುತ್ತವೆ. ಕೆಲವರಿಗೆ ಮನೆಗಳಾಗುತ್ತವೆ. ಮನುಷ್ಯ ಜೀವನವು ಸಹ ಹಾಗೆಯೇ ಇರುತ್ತದೆ. ಅಕ್ಷರ ಕಲಿತ ವ್ಯಕ್ತಿ ಕೆಲವೊಮ್ಮೆ ಭ್ರಷ್ಟನಾಗಬಹುದು. ಆದರೆ ಸಂಸ್ಕಾರ ಕಲಿತ ವ್ಯಕ್ತಿ ಎಂದಿಗೂ ಭ್ರಷ್ಟನಾಗುವುದಿಲ್ಲ. ಜಗತ್ತಿನಲ್ಲಿ ಎಲ್ಲರನ್ನೂ ಸಮಾನವಾಗಿ ಕಾಣುವುದು ಗಡಿಯಾರ ಮಾತ್ರ. ಬಡವರಿಗೂ ಶ್ರೀಮಂತರಿಗೂ ಒಂದೇ ರೀತಿ ಇರುತ್ತದೆ. ಇದು ಯಾರಿಗೂ ತಲೆ ಬಾಗುವುದಿಲ್ಲ. ವಿದ್ಯಾ, ಬುದ್ಧಿ, ಹೃದಯ, ಹೊಟ್ಟೆ, ನೆಲ, ಜಲ, ಅನ್ನ, ಗಾಳಿ, ಬೆಳಕು ಇವೆಲ್ಲವೂ ದೇವರು ಕೊಟ್ಟ ಕೊಡುಗೆ ಎಂಬುದನ್ನು ಯಾರೂ ಮರೆಯಬಾರದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮ ಸಂವಿಧಾನದಲ್ಲಿ ನಿರೂಪಿಸಿದ್ದನ್ನು ಎಲ್ಲರೂ ನೆನಪಿಡುವ ಅವಶ್ಯಕತೆ ಇದೆಯೆಂದರು.

ಸಮಾರಂಭದಲ್ಲಿ ರಾಯಚೂರು ಕಿಲ್ಲಾ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ ಸ್ವಾಮಿಗಳು, ಹುಡುಗಿ ಹಿರೇಮಠದ ಸೋಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮತ್ತು ಹೂವಿನ ಹಡಗಲಿ ಗವಿಮಠದ ಶಾಂತವೀರ ಸ್ವಾಮೀಜಿ ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಆಗಸ್ಟ್ ತಿಂಗಳಿನ 'ರಂಭಾಪುರಿ ಬೆಳಗು' ಮಾಸ ಪತ್ರಿಕೆಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆಗೊಳಿಸಿದರು. ಹೂವಿನಹಡಗಲಿ, ಆಲ್ದೂರು, ಬೆಂಗಳೂರು, ಕಲಬುರ್ಗಿ, ಲಕ್ಷ್ಮೇಶ್ವರದ ಭಕ್ತರು ಶ್ರಾವಣ ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಗುರುಕುಲದ ಕುಲಪತಿ ಬೆಳಗಾಲಪೇಟೆ ಹಿರೇಮಠದ ಸಿದ್ಧಲಿಂಗಯ್ಯ ಶಾಸ್ತ್ರಿಗಳಿಂದ ಸ್ವಾಗತ, ವಿಠಲಾಪುರ ಹಿರೇಮಠದ ಗಂಗಾಧರ ಸ್ವಾಮಿ ಅವರಿಂದ ಪ್ರಾರ್ಥನೆ ಜರುಗಿತು. ಪ್ರಭಾರಿ ಮುಖ್ಯೋಪಾಧ್ಯಾಯ ವೀರೇಶ ಕುಲಕರ್ಣಿ ನಿರೂಪಿಸಿದರು.

ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನದಲ್ಲಿ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನುಷ್ಯನ ದೈಹಿಕ ಬೆಳವಣಿಗೆಗೆ ನೀರು, ಆಹಾರ ಮುಖ್ಯವಾಗಿರುವಂತೆ ಬದುಕಿನ ವಿಕಾಸಕ್ಕೆ ಮತ್ತು ಅಭಿವೃದ್ಧಿಗೆ ಧರ್ಮಾಚರಣೆ ಅಗತ್ಯವಾಗಿದೆ. ಒಳ್ಳೆಯ ನಡತೆ ಮನುಷ್ಯನ ಆಸ್ತಿ. ಒಳ್ಳೆಯ ಸಂಬಂಧ ಜೀವನದ ಆಸ್ತಿ. ಒಳ್ಳೆಯ ಪುಸ್ತಕ ಜ್ಞಾನದ ಆಸ್ತಿ. ಒಳ್ಳೆಯ ಮಾನವೀಯತೆ ಸಮಾಜದ ಆಸ್ತಿ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೆಲೆಯುಳ್ಳ ಮಾನವ ಜೀವನಕ್ಕೆ ಸಂಸ್ಕಾರ-ಸಂಸ್ಕೃತಿಯಿತ್ತು ಸಕಲರನ್ನು ಉದ್ಧರಿಸಿದರೆಂದರು.

ಹೈಕೋರ್ಟ್ ಛೀಮಾರಿ ಹಾಕಿದ ನಂತರ ರಸ್ತೆಗಿಳಿದ ಸಾರಿಗೆ ಬಸ್‌ಗಳು । ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆದ ಬಂದ್‌ನ ಅಪ್ಡೇಟ್

# ಸಾರಿಗೆ ಮುಷ್ಕರ ದಿಢೀರ್ ವಾಪಸ್









■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸಾರಿಗೆ ನೌಕರರು ಮಂಗಳವಾರ ರಾಜ್ಯದೆಲ್ಲೆಡೆ ಮುಷ್ಕರ ನಡೆಸಿದರು.

ನೌಕರರು ಕರೆ ಕೊಟ್ಟ ಮುಷ್ಕರಕ್ಕೆ ಎಲ್ಲೆಡೆ ಬೆಂಬಲವೂ ವ್ಯಕ್ತವಾಗಿತ್ತು. ಇದರಿಂದ ಕರ್ನಾಟಕದೆಲ್ಲೆಡೆ ಬಸ್ ಗಾಗಿ ವಿದ್ಯಾರ್ಥಿಗಳು, ಸಾರ್ವಜನಿಕರು ಇನ್ನಿಲ್ಲದ ಪರದಾಟ ನಡೆಸಿದರು. ಅಲ್ಲದೇ ಕೆಲವೆಡೆ ಅವಾಂತರಗಳು ಕೂಡ ನಡೆದವು.

ಇನ್ನೂ ಸಾರಿಗೆ ನೌಕರರ ಮುಷ್ಕರಕ್ಕೆ ಸಂಬಂಧಿಸಿದಂತೆ ಆಗಸ್ಟ್ 4 ರಂದು ವಿಚಾರಣೆ ನಡೆಸಿದ್ದ ಹೈಕೋರ್ಟ್ ಒಂದು ದಿನದ ಮಟ್ಟಿಗೆ ಮುಷ್ಕರ ಮುಂದೂಡುವಂತೆ ಸೂಚನೆ ನೀಡಿತ್ತು. ಆದ್ರೆ, ಸಾರಿಗೆ ಸಂಘಟನೆಗಳು ಹೈಕೋರ್ಟ್ ಆದೇಶವನ್ನೂ ಲೆಕ್ಕಿಸದೆ ಮಂಗಳವಾರ ಅನೇಕ ಕಡೆಗಳಲ್ಲಿ ಮುಷ್ಕರ ಮಾಡಿರುವುದರಿಂದ ಹೈಕೋರ್ಟ್ ತೀವ್ರ ತರಾಟೆಗೆ ತೆಗೆದುಕೊಂಡಿತ್ತು. ನ್ಯಾಯಾಂಗ ನಿಂದನೆ ಕೇಸ್ ದಾಖಲಿಸುವ ಎಚ್ಚರಿಕೆ ನೀಡಿದ ಬೆನ್ನಲ್ಲೆ ಸಾರಿಗೆ ಸಂಘಟನೆಗಳು ಮುಷ್ಕರ ವಾಪಾಸ್ ತೆಗೆದುಕೊಂಡಿವೆ.

ಹೈಕೋರ್ಟ್ ಆದೇಶದ ನಡುವೆಯೂ ಮುಷ್ಕರ ಮುಂದುವರಿಸಿದರೆ ಎಸ್ಮಾ ಅಡಿಯಲ್ಲಿ ಸರ್ಕಾರ ಕ್ರಮ ಕೈಗೊಳ್ಳಬಹುದು ಎಂದು ಸರ್ಕಾರಕ್ಕೆ ಸಿಜೆ ವಿಭು ಬಕ್ರು ಹಾಗೂ ನ್ಯಾಯಮೂರ್ತಿ ಸಿ.ಎಂ ಜೋಶಿ ಅವರಿದ್ದ ಪೀಠ ಸೂಚನೆ ನೀಡಿದ ಬೆನ್ನಲ್ಲೆ ಅಲರ್ಟ್ ಆದ ಸಾರಿಗೆ ನೌಕರರ ಮುಖಂಡರು ಮುಷ್ಕರವನ್ನು ಮುಂದೂಡಿರುವುದಾಗಿ ತಿಳಿಸಿದರು. ಮಾತ್ರವಲ್ಲ, ಈ ಕ್ಷಣದಿಂದಲೇ ಕರ್ತವ್ಯಕ್ಕೆ ಹಾಜರಾಗುವಂತೆ ತನ್ನ ನೌಕರರಿಗೆ ಸೂಚನೆ ನೀಡಿದರು.

**ತಕ್ಷಣದಿಂದಲೇ ಕರ್ತವ್ಯಕ್ಕೆ ಹಾಜರಾಗಲು ಸೂಚನೆ**

ಹೈಕೋರ್ಟ್ ಆದೇಶದ ಬೆನ್ನಲ್ಲೆ ಸುದ್ದಿಗೋಷ್ಠಿ ನಡೆಸಿದ ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಅನಂತ ಸುಬ್ಬರಾವ್, ಸದ್ಯಕ್ಕೆ ಮುಷ್ಕರ ವಾಪಸ್ ತೆಗೆದುಕೊಳ್ಳಲಾಗಿದೆ. ಸಾರಿಗೆ ನೌಕರರು ಈ ಕ್ಷಣದಿಂದಲೇ ಕೆಲಸಕ್ಕೆ ಹಾಜಾರಾಗಿ ಎಂದು ಸೂಚನೆ ನೀಡಿದರು. ಮುಷ್ಕರ ಕೈ ಬಿಟ್ಟಿಲ್ಲ ಸದ್ಯಕ್ಕೆ ಮುಂದೂಡಿದೆ ಎಂದು ಸ್ಪಷ್ಟಪಡಿಸಿದರು.

ಮುಷ್ಕರ ಮುಂದೂಡಿರೋದರಿಂದ ಎಸ್ಮಾ ಕಾಯ್ದೆ ಉಲ್ಲಂಘನೆಯಾಗಲ್ಲ, ಸಿಎಂ ಮಾತುಕತೆಗೆ ಕರೆಯಬೇಕು. ನಮ್ಮ ಬೇಡಿಕೆಗಳನ್ನು ಈಡೇರಿಸಲು ಮುಂದಾಗಬೇಕು, ಎಲ್ಲರೂ ಕೆಲಸಕ್ಕೆ ಹೋಗಿ ನಿಮ್ಮ ಜೊತೆಗೆ ನಾವು ಇದ್ದೇವೆ ಎಂದು ಹೇಳಿದರು.

ಹೈಕೋರ್ಟ್ ಛೀಮಾರಿ ಬೆನ್ನಲ್ಲೇ ಎಚ್ಚೆತ್ತ ಸಾರಿಗೆ ನೌಕರರು, ಬಳಿಕ ಎಂದಿನಂತೆ ಕಾರ್ಯ ನಿರ್ವಹಿಸಿದರು. ಕರ್ನಾಟಕದ ಸಾರಿಗೆ ನೌಕರರ ಮುಷ್ಕರವು ಹೈಕೋರ್ಟ್‌ನ ಖಡಕ್ ಎಚ್ಚರಿಕೆಯ ನಂತರ ಅಂತ್ಯಗೊಂಡಿದೆ. ನಾಲ್ಕೂ ಸಾರಿಗೆ ನಿಗಮಗಳ ಬಸ್‌ಗಳ ಸಂಚಾರವು ಪುನರಾರಂಭಗೊಂಡಿದೆ. ಪ್ರಯಾಣಿಕರು ಖುಷಿಪಟ್ಟಿದ್ದಾರೆ.

**ಬಸ್ ಸಂಚಾರ ಬಂದ್ ಏಕೆ?**

ತಮ್ಮ ವಿವಿಧ ಬೇಡಿಕೆಗಳನ್ನು ಸರ್ಕಾರ ಈಡೇರಿಸಬೇಕೆಂದು ಸಾರಿಗೆ ಇಲಾಖೆ ನೌಕರರು ಮಂಗಳವಾರ ಮುಷ್ಕರ ನಡೆಸಿದರು. ಮುಷ್ಕರ ಹಿನ್ನೆಲೆಯಲ್ಲಿ ಸಾರಿಗೆ ನೌಕರರು ಕೆಲಸಕ್ಕೆ ಹಾಜರಾಗಿಲ್ಲ. ಇದರಿಂದ ನಾಲ್ಕೂ ನಿಗಮಗಳ ಬಸ್ ಸಂಚಾರ ಸ್ಥಗಿತಗೊಂಡಿದ್ದವು.

**ಮುಷ್ಕರದಿಂದ ಎಲ್ಲೆಲ್ಲಿ ಏನಾಯ್ತು?**

**ಬೀದರ್:** ವೇತನ ಪರಿಷ್ಕರಣೆ ಸಹಿತ ವಿವಿಧ ಬೇಡಿಕೆಗಳನ್ನು ಮುಂದಿಟ್ಟು ರಾಜ್ಯದ ಸಾರಿಗೆ ನಿಗಮಗಳ ನೌಕರರು ಮಂಗಳವಾರದಿಂದ ಮುಷ್ಕರ ಆರಂಭಿಸಿದ್ದರು, ಬೀದರ್ ನ ಬಸ್ ನಿಲ್ದಾಣದಲ್ಲಿ ಖಾಸಗಿ ವಾಹನಗಳದ್ದೇ ದರ್ಬಾರು ಕಂಡು ಬಂದಿತು. ಮಂಗಳವಾರ ಮುಂಜಾನೆಯಿಂದ ಯಾವುದೇ ರೀತಿಯ ಸರ್ಕಾರಿ ಬಸ್ಸುಗಳು ರಸ್ತೆಗೆ ಇಳಿಯದ ಕಾರಣ, ಪ್ರಯಾಣಿಕರು ನಗರದ ಬಸ್ ನಿಲ್ದಾಣದಲ್ಲಿ ಪರದಾಡುವಂತಾಯಿತು. ಇದರಿಂದಾಗಿ ಸರ್ಕಾರಿ ಬಸ್ ನಿಲ್ಲುವ ಸ್ಥಳದಲ್ಲಿ ಖಾಸಗಿ ವಾಹನಗಳು ಬಂದು ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದವು. ಆದರೆ, ಖಾಸಗಿ ವಾಹನಗಳು ಪ್ರಮುಖ ನಗರಗಳಿಗೆ ಮಾತ್ರ ಸಾಗುತ್ತಿದ್ದವು. ಹಳ್ಳಿಗಳಿಗೆ ಹೋಗುವ ಪ್ರಯಾಣಿಕರಿಗೆ ಸಮಸ್ಯೆ ಉಂಟಾಗಿತ್ತು.

ಸರ್ಕಾರದ ಖಾಸಗಿ ವಾಹನಗಳು ಹೆಚ್ಚಿನ ದುಡ್ಡು ವಸೂಲಿ ಮಾಡುತ್ತಿವೆ ಎಂದು ಪ್ರಯಾಣಿಕರು ಆರೋಪಿಸಿದರು. ಮುಂಜಾನೆಯಿಂದ ಸರ್ಕಾರಿ ಬಸ್ಸುಗಳು ಸ್ಥಬ್ದವಾಗಿದ್ದರಿಂದ ಪ್ರಯಾಣಿಕರಿಗೆ ಖಾಸಗಿ ವಾಹನಗಳಲ್ಲಿ ತೆರಳುವುದು ಅನಿವಾರ್ಯವಾಯಿತು.

# ನೂತನ ಇಓ ಚಂದ್ರಶೇಖರ್ ಕಂದಕೂರ ಅಧಿಕಾರ ಸ್ವೀಕಾರ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಗಜೇಂದ್ರಗಡ ತಾಲೂಕು ಪಂಚಾಯಿತಿಗೆ ನೂತನ ಕಾರ್ಯ ನಿರ್ವಾಹಕ ಅಧಿಕಾರಿಯಾಗಿ ನೇಮಕಗೊಂಡಿರುವ ಚಂದ್ರಶೇಖರ್ ಬಿ. ಕಂದಕೂರ ಮಂಗಳವಾರ ಸ್ಥಳೀಯ ತಾ.ಪಂ ಕಚೇರಿಯಲ್ಲಿ ನಡೆದ ಸರಳ ಸಮಾರಂಭದಲ್ಲಿ ನಿರ್ಗಮಿತ ಇಓ ಮಂಜುಳಾ ಹಕಾರಿ ಅವರಿಂದ ಅಧಿಕೃತವಾಗಿ ಅಧಿಕಾರ ಸ್ವೀಕರಿಸಿದರು.

ಅಧಿಕಾರ ಸ್ವೀಕರಿಸಿದ ಕೆಲವೇ ಗಂಟೆಗಳಲ್ಲಿ ಚಂದ್ರಶೇಖರ್ ಅವರು ಕಾರ್ಯೋತ್ಸಾಹ ತೋರಿಸಿ, ಗೋಗೇರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿದರು. ಶಾಲೆಯ ಬೋಧಕ ಹಾಗೂ ಮೂಲಭೂತ ಸೌಕರ್ಯಗಳ ಕುರಿತಾಗಿ ತಾತ್ಕಾಲಿಕವಾಗಿ ತಾ.ಪಂ ಕಚೇರಿಗೆ ಸಲ್ಲಿಸಿದ್ದ ಮನವಿಗೆ ಸ್ಪಂದಿಸಿದ ಇಓ, ಶಾಲೆಯ ಕೊಠಡಿಗಳ ಸ್ಥಿತಿಗತಿಯ ಪರಿಶೀಲನೆ ನಡೆಸಿ, ಶಿಕ್ಷಕರೊಂದಿಗೆ ಚರ್ಚಿಸಿದರು. ದುರಸ್ತಿ ಅಗತ್ಯವಿರುವ ಕೊಠಡಿಗಳ ಕುರಿತು ಸ್ಥಳದಲ್ಲಿಯೇ ಪರಿಶೀಲನೆ ನಡೆಸಿದ ಅವರು, ಮುಂದಿನ ಆರ್ಥಿಕ ವರ್ಷದಲ್ಲಿ ಆದ್ಯತೆಯ ಆಧಾರದಲ್ಲಿ ಅನುದಾನ ಮಂಜೂರಾತಿ ಮಾಡುವ ಭರವಸೆ ನೀಡಿದರು.

ಈ ಹಿಂದೆ ಶಿಕ್ಷಕರಾಗಿ ಸೇವೆ ಸಲ್ಲಿಸಿ ಅನುಭವವುಳ್ಳ ಚಂದ್ರಶೇಖರ್ ಕಂದಕೂರ ವಿದ್ಯಾರ್ಥಿಗಳೊಂದಿಗೆ ಮಾತುಕತೆ ನಡೆಸಿ, ವಿದ್ಯೆಯ ಮಹತ್ವದ ಬಗ್ಗೆ ಸಲಹೆ ನೀಡಿ, ವಿದ್ಯಾರ್ಥಿಗಳ ಜೀವನ ಬಂಗಾರದಂತೆ. ಇಂತಹ ಪ್ರಾಯದಲ್ಲಿ ಅಧ್ಯಯನವೇ ಪ್ರಮುಖ. ಬೇರೆ ವಿಚಾರಗಳಿಗೆ ಸಮಯ ವ್ಯಯಿಸದೆ, ಕಲಿಕೆಗೆ ಹೆಚ್ಚು ಸಮಯ ನೀಡಬೇಕು ಎಂದು ಮಾರ್ಗದರ್ಶನ ನೀಡಿದರು.

ಬಳಿಕ ವಿದ್ಯಾರ್ಥಿಗಳೊಂದಿಗೆ ಬಿಸಿಯೂಟವನ್ನು ಸೇವಿಸಿ, ಆಹಾರದ ಗುಣಮಟ್ಟ ಮತ್ತು ಅಡುಗೆಯ ರುಚಿಯ ಕುರಿತು ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ತಾ.ಪಂ ಉದ್ಯೋಗ ಖಾತ್ರಿ ಯೋಜನೆಯ ಸಹಾಯಕ ನಿರ್ದೇಶಕ ಬಸವರಾಜ ಬಡಿಗೇರ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕರು, ಶಾಲಾ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕ ವೃಂದ ಸೇರಿದಂತೆ ವಿದ್ಯಾರ್ಥಿಗಳು, ಗ್ರಾ.ಪಂ ಸಿಬ್ಬಂದಿಗಳು ಹಾಗೂ ನರೇಗಾ ಸಿಬ್ಬಂದಿಗಳು

# ಶ್ರೀ ಸಾಯಿಬಾಬಾ ಭಕ್ತರ ನಂಬಿಕೆಯ ದ್ಯೋತಕ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇವರು ಇದ್ದಾನೆ ಎಂಬುದು ಪ್ರತಿಯೊಬ್ಬ ಮನುಷ್ಯನ ನಂಬಿಕೆ. ಈ ನಿಟ್ಟಿನಲ್ಲಿ ದೇವತಾ ಸ್ವರೂಪಿ, ಕರುಣಾಮಯಿ ಶ್ರೀ ಸಾಯಿಬಾಬಾ ಅವರು ಭಕ್ತರ ಬಲವಾದ ನಂಬಿಕೆ ಮತ್ತು ಜೀವನದ ಸ್ಫೂರ್ತಿಯಾಗಿದ್ದಾರೆ ಎಂದು ಗಣ್ಯ ವರ್ತಕ, ಸಾಯಿಬಾಬಾ ಭಕ್ತರಾದ ಗಂಗಾಧರ ಪುರಾಣಿಕಮಠ ಹೇಳಿದರು.

ಅವರು ಲಕ್ಷ್ಮೇಶ್ವರ ಸಮೀಪದ ಅಡರಕಟ್ಟಿ ಗ್ರಾಮದ ಈಶ್ವರ ನಗರದಲ್ಲಿ ನಿರ್ಮಾಣಗೊಂಡ ಸಾಯಿಬಾಬಾ ಮಂದಿರದ ಉದ್ಘಾಟನೆ ನಿಮಿತ್ತ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ದೇವರೊಬ್ಬ ನಾಮ ಹಲವು. ಎಲ್ಲ ಧರ್ಮಗಳ ಸಾರ ಒಂದೇ, ಅದು ಮಾನವೀಯತೆ. ಇದನ್ನೇ ಸಾರಿದ ಶ್ರೀ ಸದ್ಗುರು ಶಿರಡಿ ಸಾಯಿಬಾಬಾ ಅವರು ಭಕ್ತರ ನಂಬಿಕೆಯ ದ್ಯೋತಕವಾಗಿದ್ದಾರೆ. ಭಕ್ತಿ, ಜ್ಞಾನ, ಯೋಗ ಮತ್ತು ಆತ್ಮಸಾಕ್ಷಾತ್ಕಾರವನ್ನು ಅರುಹಿದ ಸಾಯಿಬಾಬಾ ಎಲ್ಲ ಜಾತಿ, ಧರ್ಮ ಮೀರಿದ ಸಂತರು. ಅವರು ತೋರಿದ ಆದರ್ಶ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಮಾಡುವ ದಾನ, ಧರ್ಮ, ಪುಣ್ಯ ಕಾರ್ಯಗಳಲ್ಲಿ ನಿಷ್ಕಲ್ಮಶ, ನಿಸ್ವಾರ್ಥವಿದ್ದರೆ ದೇವರು ಅದಕ್ಕೆ ಶ್ರೇಷ್ಠವಾದ ಫಲ ನೀಡುತ್ತಾನೆ ಎಂದರು. ಭಕ್ತರ ಸಹಾಯ-ಸಹಕಾರದಿಂದಲೇ ನಿರ್ಮಾಣಗೊಂಡ ಸಾಯಿಬಾಬಾ ದೇವಸ್ಥಾನದ ಲೋಕಾರ್ಪಣೆ ನಿಮಿತ್ತ ನವಗ್ರಹ ಶಾಂತಿ, ಅಭಿಷೇಕ, ವಿವಿಧ ಧಾರ್ಮಿಕ ಕಾರ್ಯಕ್ರಮಗಳು, ಹೋಮ-ಹವನ, ಪೂಜೆ, ಪ್ರಾರ್ಥನೆ, ಪ್ರಸಾದ ನೆರವೇರಿತು.

# ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ವಿತರಣೆ





■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಇಂದಿನ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಸಾಕಷ್ಟು ಸೌಲಭ್ಯಗಳಿದ್ದು, ಅದರ ಸದುಪಯೋಗ ಪಡೆದುಕೊಂಡು ಉನ್ನತ ಹುದ್ದೆಗಳನ್ನು ಪಡೆದು ಉತ್ತಮ ಜೀವನ ಕಟ್ಟಿಕೊಳ್ಳಬೇಕು ಎಂದು ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ತಿಳಿಸಿದರು.

ಹರಪನಹಳ್ಳಿ ಪಟ್ಟಣದ ಹೊರವಲಯದ ಅನಂತನಹಳ್ಳಿ ಸಮೀಪದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಥಮ ವರ್ಷದ ಎಸ್ಸಿ/ಎಸ್ಟಿ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ವಿತರಿಸಿ ಅವರು ಮಾತನಾಡಿದರು.

ಪ್ರಾಚಾರ್ಯ ಪ್ರಕಾಶ್ ಮತನಾಡಿ, ತಂತ್ರಜ್ಞಾನ ಬೆಳೆದಂತೆ ದೇಶದಲ್ಲಿ ನೂತನ ಆವಿಷ್ಕಾರಗಳು ಹೆಚ್ಚುತ್ತಿವೆ. ಕೇವಲ ಸರ್ಕಾರಿ ಉದ್ಯೋಗಗಳನ್ನು ಪಡೆಯುವತ್ತ ವಿದ್ಯಾರ್ಥಿಗಳು ಗಮನ ನೀಡಬಾರದು. ಶಿಕ್ಷಣ ಪಡೆದ ಎಲ್ಲರಿಗೂ ಸರ್ಕಾರಿ ನೌಕರಿ ಸಿಗುವುದು ಕಷ್ಟ. ಹಾಗಾಗಿ ತಾಂತ್ರಿಕ ಶಿಕ್ಷಣ ಪಡೆದವರು ಪ್ರತಿಷ್ಠಿತ ಕಂಪನಿಗಳಲ್ಲಿ ತಮ್ಮ ಪ್ರತಿಭೆಗೆ ಅನುಸಾರ ಉದ್ಯೋಗ ಹೊಂದಿ ಎಂದರು.

ಈ ವೇಳೆ ಕಾಲೇಜಿನ ವಿಭಾಗಾಧಿಕಾರಿ ಗುರುಬಸವರಾಜ್, ನವೀನ್ ಕುಮಾರ್, ಸಿ. ಬಸವರಾಜ್, ಜ್ಯೋತಿಶ್ರೀ, ಇಸ್ಮಾಯಿಲ್ ಸೇರಿದಂತೆ ಉಪನ್ಯಾಸಕರು, ಕಾಲೇಜಿನ ಸಿಬ್ಬಂದಿ ವರ್ಗದವರು ಇದ್ದರು.

# ಮುಖ್ಯ ನ್ಯಾಯಮೂರ್ತಿ ವಿಭು ಬಾಖ್ರು ಮೊದಲ ಭೇಟಿ





■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ವಿಭು ಬಾಖ್ರು ಅವರು ಸೋಮವಾರ ಕರ್ನಾಟಕ ಉಚ್ಚ ನ್ಯಾಯಾಲಯ ಧಾರವಾಡ ಪೀಠಕ್ಕೆ ಪ್ರಥಮ ಭೇಟಿಯನ್ನು ನೀಡಿದ ಸಂದರ್ಭದಲ್ಲಿ, ಮುಖ್ಯ ನ್ಯಾಯಮೂರ್ತಿಯವರನ್ನು ಕರ್ನಾಟಕ ಹೈಕೋರ್ಟ್ ಧಾರವಾಡ ಪೀಠದ ವಕೀಲರ ಸಂಘದಿಂದ ಹೃತ್ಪೂರ್ವಕವಾಗಿ ಸ್ವಾಗತಿಸಿ ಸನ್ಮಾನಿಸಲಾಯಿತು.

ಮುಖ್ಯ ನ್ಯಾಯ ಮೂರ್ತಿಯವರು ವಕೀಲರ ಸಂಘದ ಸದಸ್ಯರೊಂದಿಗೆ ಸಂವಾದ ನಡೆಸಿ, ಪ್ರಸ್ತುತ ಆಡಳಿತಾತ್ಮಕ ವಿಷಯಗಳ ಕುರಿತು ಸಮೀಕ್ಷೆ ನಡೆಸಿ, ವಾದಕರ್ತರು ಮತ್ತು ವಕೀಲರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು.

ನ್ಯಾಯಾಂಗ ವಲಯದವರು ಮುಖ್ಯ ನ್ಯಾಯಮೂರ್ತಿಯವರ ಸಕ್ರಿಯ ಸಂವಾದಕ್ಕೆ ಕೃತಜ್ಞತೆ ಸಲ್ಲಿಸಿ, ಪ್ರಾದೇಶಿಕ ಸಮಸ್ಯೆಗಳಿಗೆ ಗಂಭೀರತೆ ಮತ್ತು ತ್ವರಿತತೆಯಿಂದ ಸ್ಪಂದಿಸುವ ಅವರ ಭರವಸೆಗಳನ್ನು ಸ್ವಾಗತಿಸಿದರು.

ವಕೀಲರ ಸಂಘದ ಉಪಾಧ್ಯಕ್ಷ ಸಂತೋಷ ಬಿ.ಮಲಗೌಡರ್ ಸ್ವಾಗತಿಸಿದರು, ಗಾಯತ್ರಿ ಎಸ್.ಆರ್. ಅತಿಥಿಗಳನ್ನು ಪರಿಚಯಿಸಿದರು. ಅಧ್ಯಕ್ಷ ವಿ.ಎಂ. ಶೀಲವಂತ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಾನಸಿ ಕಾರ್ಯಕ್ರಮ ನಿರೂಪಿಸಿದರು. ದೀಪಾ ದೋಡ್ಡಟ್ಟಿ ವಂದಿಸಿದರು. ಕಾರ್ಯದರ್ಶಿ ಆನಂದ ಆರ್ ಕೊಳ್ಳಿ, ಜಂಟಿ ಕಾರ್ಯದರ್ಶಿ ಶಿವರಾಜ ಬೆಳ್ಳಕ್ಕಿ, ಖಜಾಂಚಿ ವಿಜಯ ಚಿನಿವಾರ್ ಮುಂತಾದವರು ಉಪಸ್ಥಿತರಿದ್ದರು.

# ಸಾಹಿತ್ಯ ಕ್ಷೇತ್ರದ ವಿಸ್ತಾರ ಹೆಚ್ಚಿಸಬೇಕು





■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಹಿತ್ಯ ಕ್ಷೇತ್ರ ನಿಂತ ನೀರಲ್ಲ. ಅದು ಸದಾ ಪ್ರವಹಿಸುತ್ತಿರುತ್ತದೆ. ಅದಕ್ಕೆ ಹೊಸ ಓದುಗರು, ಬರಹಗಾರರು ಬಂದು ಸೇರಿಕೊಂಡು ಸಾಹಿತ್ಯ ಕ್ಷೇತ್ರದ ವಿಸ್ತಾರ ಹೆಚ್ಚಿಸಬೇಕು ಹೂವಿನ ಶಿಗ್ಲಿಯ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.


ಪಟ್ಟಣದ ಸಹಸ್ರಾರ್ಜುನ ಬಿ.ಎಡ್ ಮಹಾವಿದ್ಯಾಲಯದಲ್ಲಿ ಕರ್ನಾಟಕ ರಾಜ್ಯ ಬರಹಗಾರ ಬಳಗ ಹೂವಿನಹಡಗಲಿ, ಜಿಲ್ಲಾ ಘಟಕ ಗದಗ ಹಾಗೂ ಬರಹಗಾರ ಬಳಗ ಲಕ್ಷ್ಮೇಶ್ವರ ಘಟಕದ ಉದ್ಘಾಟನೆ, ಪದಗ್ರಹಣ ಸಮಾರಂಭ ಮತ್ತು ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಸಾಹಿತ್ಯದ ವಿವಿಧ ಆಯಾಮಗಳು ಹೊಸ ಹೊಸ ಬರಹದ ಮೂಲಕ ಹೊರ ಬಂದಲ್ಲಿ ಕನ್ನಡ ಸಾಹಿತ್ಯ ಇನ್ನಷ್ಟು ಶ್ರೀಮಂತವಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ಈ ನಿಟ್ಟಿನಲ್ಲಿ ಲಕ್ಷೇಶ್ವರ ತಾಲೂಕಿನಲ್ಲಿ ಉದ್ಘಾಟನೆಯಾದ ಬರಹಗಾರರ ಬಳಗದಿಂದ ಸಾಹಿತ್ಯದ ವಿವಿಧ ರೀತಿಯ ಬರಹಗಳು ಹೊರಬಂದಲ್ಲಿ ಕನ್ನಡ ಸಾಹಿತ್ಯಕ್ಕೆ ಅಮೋಘ ಕೊಡುಗೆ ನೀಡಿದಂತಾಗುತ್ತದೆ. ವೇದಿಕೆಯ ಮೂಲಕ ಒಳ್ಳೆಯ ಬರಹಗಾರರು ಹೊರಬರಲಿ. ಆ ದಿಸೆಯಲ್ಲಿ ಬಳಗ ಅತ್ಯುತ್ತಮ ಕಾರ್ಯಕ್ರಮನ್ನು ಆಯೋಜಿಸಲೆಂದು ಆಶೀರ್ವದಿಸಿದರು.

ಸಹಸ್ರಾರ್ಜುನ ಬಿ.ಇಡಿ ಕಾಲೇಜಿನ ಆಡಳಿತ ಮಂಡಳಿಯ ವಸಂತ ತೊಡೆಯವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಹೊಸ ಲೇಖಕರು ಹಾಗೂ ಬರಹಗಾರರು ಹೊರಬಂದಲ್ಲಿ ಈ ವೇದಿಕೆಯ ಉದ್ದೇಶ ಈಡೇರಿದಂತಾಗುತ್ತದೆ ಎಂದರು.

ನಿವೃತ್ತ ಶಿಕ್ಷಕ ಎಸ್.ಎಫ್. ಆದಿ ಸಾಹಿತ್ಯ ರಚನೆಯಲ್ಲಿ ವಿವಿಧ ಆಯಾಮಗಳು ಕುರಿತು ಉಪನ್ಯಾಸ ನೀಡಿದರು. ಗದಗ ಜಿಲ್ಲಾಧ್ಯಕ್ಷೆ ಕಲಾಶ್ರೀ ಹಾದಿಮನಿ, ಕೃಷ್ಣಸಾ ಖೋಡೆ, ಪ್ರಾಚಾರ್ಯ ರೇಣುಕಾನಂದ ಅಂಗಡಿ, ನಿರ್ಮಲಾ ಅರಳಿ, ರತ್ನಾ ಕರ್ಕಿ, ಎಲ್.ಎಸ್. ಅರಳಿಹಳ್ಳಿ ಇದ್ದರು. ಲಕ್ಷೇಶ್ವರ ತಾಲೂಕು ಬರಹಗಾರರ ಬಳಗದ ತಾಲೂಕಾಧ್ಯಕ್ಷ ಜೆ.ಎಸ್. ರಾಮಶೆಟ್ಟರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಸವರಾಜ ಸಂಗಪ್ಪಶೆಟ್ಟರ ಕಾರ್ಯಕ್ರಮ ನಿರೂಪಿಸಿದರು. ಶಂಕರ ಶಿಳ್ಳಿನ ವಂದಿಸಿದರು.

## ರಾಘವೇಂದ್ರ ಸ್ವಾಮಿಗಳ ಆರಾಧನೆ ಆ.10ರಿಂದ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಆ. 10ರಿಂದ 3 ದಿನಗಳ ಕಾಲ ರಾಯರ 305ನೇ ಆರಾಧನಾ ಮಹೋತ್ಸವವು ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ನೆರವೇರಲಿದ್ದು, ಎಲ್ಲ ಸಮಾಜ ಬಾಂಧವರು ಪಾಲ್ಗೊಳ್ಳಬೇಕೆಂದು ಶ್ರೀಮಠದ ಧರ್ಮದರ್ಶಿ ಹನುಮಂತಾಚಾರ್ಯ ಹೊಂಬಳ ತಿಳಿಸಿದ್ದಾರೆ.

ನಿತ್ಯ ಮಠದಲ್ಲಿ ಶ್ರೀ ರಾಘವೇಂದ್ರ ಸ್ತೋತ್ರ, ಅಷ್ಟೋತ್ತರ, ಅಭಿಷೇಕ, ವಿಶೇಷ ಅಲಂಕಾರ, ಪುರಾಣ–ಪ್ರವಚನ, ಪಾರಾಯಣ, ಸಂಗೀತ ಸೇವೆ ನಡೆಯಲಿದೆ. ಆ.12ರಂದು ಬೆಳಿಗ್ಗೆ 10ಕ್ಕೆ ಸಕಲ ವಾದ್ಯ ವೈಭವ, ಭಜನೆಗಳಿಂದ ರಥೋತ್ಸವ ನೆರವೇರಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಂಗಳೂರಿನಲ್ಲಿ 1.5 ಕಿ.ಲೋ ಮೀಟರ್ ಉದ್ದದ ಮತ್ತೊಂದು ಟನಲ್ ರೋಡ್ ಘೋಷಿಸಿದ DCM ಡಿಕೆಶಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು, ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ 1.5 ಕಿ.ಲೋ ಮೀಟರ್ ಉದ್ದದ ಮತ್ತೊಂದು ಟನಲ್ ರೋಡ್ ಘೋಷಿಸಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಹೆಬ್ಬಾಳದ ಎಸ್ಟೀಮ್ ಮಾಲ್‌ನಿಂದ ಗಾಂಧಿ ಕೃಷಿ ವಿಜ್ಞಾನ ಕೇಂದ್ರದವರೆಗೆ 1.5 ಕಿ.ಲೋ ಮೀಟರ್ ಉದ್ದದ ಹೊಸ ಟನಲ್ ರಸ್ತೆ ನಿರ್ಮಾಣವಾಗಲಿದೆ. ಮುಂದಿನ ಕ್ಯಾಬಿನೆಟ್‌ನಲ್ಲಿ ಯೋಜನೆಗೆ ಅನುಮತಿ ಪಡೆದು, 2 ವರ್ಷದಲ್ಲಿ ಕಾಮಗಾರಿ ಮುಗಿಸುತ್ತೇವೆ. ವಿಶೇಷ ಹೊಸ ತಂತ್ರಜ್ಞಾನದ ಮೂಲಕ ಈ ಸುರಂಗ ಮಾರ್ಗ ನಿರ್ಮಿಸಲಾಗುವುದು ಎಂದಿದ್ದಾರೆ.

### ಗದಗ ಜಿಲ್ಲಾ ಪಟಾಕಿ ವ್ಯಾಪಾರಸ್ಥರ ಸಂಘದ ಉದ್ಘಾಟನಾ ಸಮಾರಂಭದಲ್ಲಿ ಮಣಕವಾಡ ಶ್ರೀಗಳು

# ಬೇಡಿಕೆ ಸಾಕಾರಗೊಳ್ಳಲು ಸಂಘಟನೆ ಅವಶ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಬೇಡಿಕೆಗಳನ್ನು ಸಾಕಾರಗೊಳಿಸಲು ಸಂಘಟನೆ ಅವಶ್ಯ. ಗದಗ ಜಿಲ್ಲಾ ಪಟಾಕಿ ವ್ಯಾಪಾರಸ್ಥರ ಸಂಘಟನೆಯನ್ನು ಅಸ್ತಿತ್ವಕ್ಕೆ ತಂದಿರುವದು ಯೋಗ್ಯವಾಗಿದ್ದು, ಸಂಘಟನೆಯ ಬಲವರ್ಧನೆಗೆ ಎಲ್ಲರೂ ಕೈ ಜೋಡಿಸಬೇಕು ಎಂದು ಮಣಕವಾಡದ ಅನ್ನದಾನೇಶ್ವರ ದೇವ ಮಂದಿರದ ಪೂಜ್ಯ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ಹೇಳಿದರು.

ಅವರು ಸೋಮವಾರ ಗದುಗಿನ ಶ್ರೀಮತಿ ಉಷಾದೇವಿ ಜಿ.ಕುಷ್ಟಗಿ ರೋಟರಿ ಕಮ್ಯೂನಿಟಿ ಕೇರ್ ಸೆಂಟರ್‌ನಲ್ಲಿ ಗದಗ ಜಿಲ್ಲಾ ಪಟಾಕಿ ವ್ಯಾಪಾರಸ್ಥರ ಸಂಘದ ಉದ್ಘಾಟನಾ ಸಮಾರಂಭ ಹಾಗೂ ಶ್ರಮಿಕರಿಗೆ ಸನ್ಮಾನ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು.

ನಾವಿಂದು ಪರಿಸರವನ್ನು ಸಂರಕ್ಷಿಸುವ ಮೂಲಕ ಪರಿಶುದ್ಧ ವಾತಾವರಣ ಸೃಷ್ಟಿಯಾಗುವಂತೆ ನೋಡಿಕೊಳ್ಳುವದು ಅವಶ್ಯವಿದೆ.




ಇಲ್ಲವಾದಲ್ಲಿ ಬರಲಿರುವ ದಿನಮಾನಗಳಲ್ಲಿ ಆಕ್ಸಿಜನ್ ಸೆಂಟರ್‌ಗಳ ಮೂಲಕ ಉಸಿರಾಟ ನಡೆಸುವ ಕಾಲ ಬರಬಹುದು ಎಂದರು.

ಉದ್ಘಾಟಕರಾಗಿ ಆಗಮಿಸಿದ್ದ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಮಾತನಾಡಿ, ಗದುಗಿನಲ್ಲಿ ಇಂತಹ ಸಂಘಟನೆಯೊಂದನ್ನು ಹುಟ್ಟು ಹಾಕಿರುವದು ಅಭಿನಂದನೀಯ. ಈ ಸಂಘಟನೆಯು ಬಲವರ್ಧನೆಗೊಂಡು ಪಟಾಕಿ ವ್ಯಾಪಾರಸ್ಥರ ಸೌಲಭ್ಯಗಳನ್ನು ಪಡೆಯುವ ಕಾರ್ಯ ಆಗಲಿ. ಪರಿಸರ ಸಮತೋಲನಕ್ಕೆ ನಾವು ಬದ್ಧತೆಯಿಂದ ಕಾರ್ಯ ಮಾಡಬೇಕಿದೆ. ಜೊತೆಗೆ ಪರಿಸರ ಸ್ನೇಹಿ ಪಟಾಕಿ ಬಳಕೆಗೆ ನಾವು ಮುಂದಾಗಬೇಕಿದೆ ಎಂದರಲ್ಲದೆ, ವ್ಯಾಪಾರಸ್ಥರ ಸಮಸ್ಯೆಗಳಿದ್ದಲ್ಲಿ ಸಚಿವರ ಮೂಲಕ ಪರಿಹಾರ ಕಂಡುಕೊಳ್ಳಲು ತಾವೂ ಸಹಕಾರ ನೀಡುವದಾಗಿ ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಶ್ರೀಧರಗೌಡ ಧರ್ಮಾಯತ ಮಾತನಾಡಿ, ಗದಗ ಸೇರಿದಂತೆ ಗದಗ ಜಿಲ್ಲೆಯ ವಿವಿಧ ತಾಲೂಕಿನ ಪಟಾಕಿ ವ್ಯಾಪಾರಸ್ಥರು ದೀಪಾವಳಿ ಹಾಗೂ ಗಣೇಶ ಚತುರ್ಥಿಯ ಸಂದರ್ಭದಲ್ಲಿ ವ್ಯಾಪಾರ ವಹಿವಾಟು ಮಾಡಲು ಬಹಳಷ್ಟು ಸಮಸ್ಯೆಗಳನ್ನು ಎದುರಿಸುವಂತಾಗಿದೆ. ಪಟಾಕಿ ಮಾರಾಟಕ್ಕಾಗಿ ಪ್ರತ್ಯೇಕವಾಗಿ ತಾತ್ಕಾಲಿಕವಾಗಲಿ, ಶಾಶ್ವತವಾಗಲಿ ವ್ಯವಸ್ಥೆ ಇಲ್ಲದೆ ಪರದಾಡುವಂತಾಗಿದೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಂಡು ಮಾರ್ಗದರ್ಶನ ಮಾಡಬೇಕೆಂದರು.

**ಪದಾಧಿಕಾರಿಗಳು**

ಸಂಘದ ಅಧ್ಯಕ್ಷರಾಗಿ ಶ್ರೀಧರಗೌಡ ಧರ್ಮಾಯತ, ಉಪಾಧ್ಯಕ್ಷರಾಗಿ ವಾಸುದೇವ ಸುರೇಬಾನ, ಕಾರ್ಯದರ್ಶಿಯಾಗಿ ಸಂಕೇತ ಹೆಬಸೂರ, ಸಹ ಕಾರ್ಯದರ್ಶಿಯಾಗಿ ನಾಗರಾಜ ಸುರೇಬಾನ, ಖಜಾಂಚಿಯಾಗಿ ಯಲ್ಲಪ್ಪ ಧಾರವಾಡ, ಸಂಘಟನಾ ಕಾರ್ಯದರ್ಶಿಯಾಗಿ ವಿಜಯಕುಮಾರ ಮೇರವಾಡೆ ಅಧಿಕಾರ ವಹಿಸಿಕೊಂಡರು.

ಇವರೊಂದಿಗೆ ಇತರ ಪದಾಧಿಕಾರಿಗಳನ್ನು ಪೂಜ್ಯರು ಸನ್ಮಾನಿಸಿದರು.


ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ತಾತನಗೌಡ ಪಾಟೀಲ, ವಿದ್ಯಾದಾನ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ದತ್ತಾ ಡೆವಲಪರ್ಸ್‌ನ ಪಾಲುದಾರರಾದ ಎಸ್.ಎಚ್. ಶಿವನಗೌಡರ, ಗಣ್ಯ ವ್ಯಾಪಾರಸ್ಥರಾದ ಸದಾಶಿವ ಮದರಿಮಠ ಮಾತನಾಡಿದರು.

ಸಂಘದ ಅಧ್ಯಕ್ಷ ಶ್ರೀಧರಗೌಡ ಧರ್ಮಾಯತ ಬೇಡಿಕೆಯ ಮನವಿಯನ್ನು ಕೃಷ್ಣಗೌಡ ಪಾಟೀಲರ ಮೂಲಕ ಸಚಿವ ಎಚ್.ಕೆ. ಪಾಟೀಲರಿಗೆ ಸಲ್ಲಿಸಿದರು. ಸಮಾರಂಭದಲ್ಲಿ ರಾಜು ಪವಾರ, ರಾಚಪ್ಪ ಕಾಡಪ್ಪನವರ, ಪ್ರಹ್ಲಾದ ಹೆಬಸೂರ, ಶ್ರೀಕಾಂತ ಮೇರವಾಡೆ, ಸತ್ಯನಾರಾಯಣ ಸುರೇಬಾನ, ಮುರಳೀಧರ ಹಬೀಬ, ಸರಸ್ವತಿಬಾಯಿ ಮೇರವಾಡೆ ಸೇರಿದಂತೆ ಜಿಲ್ಲೆಯ ಎಲ್ಲ ತಾಲೂಕಿನ ಪಟಾಕಿ ವ್ಯಾಪಾರಸ್ಥರು ಪಾಲ್ಗೊಂಡಿದ್ದರು.

ಸಾನ್ವಿ ಹೆಬಸೂರ ಹಾಗೂ ಶುಭಂ ಸುರೇಬಾನ ಪ್ರಾರ್ಥಿಸಿದರು, ಪ್ರೊ. ಬಾಹುಬಲಿ ಜೈನರ್ ನಿರೂಪಿಸಿ ವಂದಿಸಿದರು.


## ಸಿಂದೂರ ಚೆಕ್ಸ್ ಸೀರೆ'ಗೆ ಪ್ರಶಸ್ತಿ

▶▶ಮೊದಲನೇ ಪುಟದಿಂದ




ಸದರಿ ನೇಕಾರರಿಗೆ ಆಗಸ್ಟ್ 7ರಂದು ಬೆಂಗಳೂರಿನ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಜರುಗುವ 11ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆಯಲ್ಲಿ 20 ಸಾವಿರ ರೂ.ಗಳ ಬಹುಮಾನ ಹಾಗೂ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಗುವುದು. ಕೇಂದ್ರ ಸರ್ಕಾರದಿಂದ ಇವರಿಗೆ 60 ವರ್ಷ ಆದ ನಂತರದಿಂದ ಅಂತ್ಯ ಕಾಲದವರೆಗೆ ಮಾಸಿಕ 8 ಸಾವಿರ ರೂ.ಗಳ ವೃದ್ಧಾಪ್ಯ ವೇತನ ನೀಡಲಾಗುವುದು.

## ಸ್ವಗ್ರಾಮ ಫೆಲೋಶಿಪ್ ಪ್ರತಿನಿಧಿಗಳಿಂದ ಹಿರೆಕೆರೆ ವೀಕ್ಷಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದಲ್ಲಿ ಸ್ವಗ್ರಾಮ ಫೆಲೋಶಿಪ್‌ನ 8ನೇ ಅವಲೋಕನಾ ಸಭೆಯ ಪ್ರತಿನಿಧಿಗಳು ರವಿವಾರ ಬೆಳಿಗ್ಗೆ ಹಿರೇಕೆರೆಯನ್ನು ಸಂದರ್ಶಿಸಿ ಮಾಹಿತಿ ಪಡೆದುಕೊಂಡರು. ನೆಲಜಲ ಸಂರಕ್ಷಣಾ ಸಮಿತಿಯ ಅಧ್ಯಕ್ಷ ಗುರುರಾಜ ಕುಲಕರ್ಣಿ ಪ್ರತಿನಿಧಿಗಳಿಗೆ ಸಮಿತಿಯಿಂದ ಕೆರೆಯ ಹೂಳೆತ್ತಿದ ವಿವರಣೆಯನ್ನು ನೀಡಿದರು.

ಈ ಕಾರ್ಯಕ್ಕೆ ನಮಗೆ ಪ್ರೇರಣೆಯಾದವರು ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರು. 2017ರಲ್ಲಿ ದ್ಯಾಮವ್ವನ ಜಾತ್ರೆಗೆಂದು ಬಂದಿದ್ದ ಅವರು ಈ ವಿಷಯವನ್ನು ತಿಳಿಸಿ ಒಂದು ಲಕ್ಷ ರೂ.ಗಳ ಅನುದಾನವನ್ನು ನೀಡಿ ಕಾರ್ಯ ಪ್ರಾರಂಭಿಸಲು ಪ್ರೇರಣೆ ನೀಡಿದರು. ಜಿಲ್ಲಾಧಿಕಾರಿಗಳಿಂದ, ಪ.ಪಂನಿಂದ ಅನುಮತಿ ಪಡೆದು ಈ ಕೆರೆಯ ಹೂಳನ್ನು ಅಂದಾಜು 15 ಅಡಿಯವರೆಗೆ ತೆಗೆದಿದ್ದೇವೆ. ಇದರಲ್ಲಿ ನರೇಗಲ್ಲ ಮತ್ತು ಮಜರೆ ಗ್ರಾಮಗಳ ಜನರ, ರೈತರ, ಕಟ್ಟಡ ಕಾರ್ಮಿಕರ ಸಹಕಾರ ಬಹಳಷ್ಟು ದೊಡ್ಡದು ಎಂದರು.


ಸದಸ್ಯ ಜಗದೀಶ ಸಂಕನಗೌಡ್ರ ಮಾತನಾಡಿ, ಈ ಕೆರೆಯ ಹೂಳೆತ್ತುವ ಕಾರ್ಯವನ್ನು ಜನ ಮೆಚ್ಚಿಕೊಂಡು ನಮ್ಮ ಸಮಿತಿಯ ಕಾರ್ಯಗಳಿಗೆ ಬೆನ್ನೆಲುಬಾಗಿ ನಿಂತಿದ್ದನ್ನು ನಾವೆಂದಿಗೂ ಮರೆಯುವಂತಿಲ್ಲ.

ನಮಗೆ ಸಲಹೆ, ಮಾರ್ಗದರ್ಶನ ನೀಡಿದವರು ಶಿವಾನಂದ ಕಳವೆಯವರು ಎಂದರು. ಶಿವನಗೌಡ ಪಾಟೀಲ ಮಾತನಾಡಿ, ಶಾಸಕ ಜಿ.ಎಸ್. ಪಾಟೀಲರು ಈ ಕೆರೆಗೆ ಮಲಪ್ರಭಾ ನದಿಯಿಂದ ನೀರು ತುಂಬಿಸುವ ಕಾರ್ಯಕ್ಕೆ ಈಗಾಗಲೇ ಮುಂದಾಗಿದ್ದು, ಅದಕ್ಕೆ ಸಂಬಂಧಿಸಿದ ಕ್ರಿಯಾ ಯೋಜನೆ ಸಿದ್ಧವಾಗುತ್ತಿದೆ ಎಂದರು.

ಎರಡು ದಿನಗಳ ಕಾಲ ನಡೆದ ವಿವಿಧ ಕಾರ್ಯಕ್ರಮಗಳಲ್ಲಿ ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು, ಕುಲಪತಿಗಳು, ರಾಜ್ಯದ ವಿವಿಧೆಡೆಯಿಂದ ಬಂದ ಪ್ರತಿನಿಧಿಗಳು ಪಾಲ್ಗೊಂಡಿದ್ದರು. ಸಂಜೆ ಗರಡಿ ಮನೆ ಭೇಟಿ, ದೊಡ್ಡಾಟ ಕಲೆ, ಭಜನಾ ಕಲೆಗಳ ವೀಕ್ಷಣೆಯನ್ನು ಮಾಡಿ ಸಂತಸಪಟ್ಟರು. ಈ ಸಂದರ್ಭದಲ್ಲಿ ಶಿಬಿರಕ್ಕೆ ಭೇಟಿ ನೀಡಿದ್ದ ಮಾಜಿ ಶಾಸಕ ಡಿ. ಆರ್. ಪಾಟೀಲ ದೊಡ್ಡಾಟ ಪ್ರದರ್ಶನ ನೋಡಿ ಸಂತಸಪಟ್ಟರು.

## ಮೂರಂತಸ್ತಿನ ಕಟ್ಟಡದಿಂದ ಬಿದ್ದು ಯುವತಿ ಅನುಮಾಸ್ಪದ ಸಾವು!





■ವಿಜಯಸಾಕ್ಷಿ ಸುದ್ದಿ, ನೆಲಮಂಗಲ

ಮೂರಂತಸ್ತಿನ ಕಟ್ಟಡದಿಂದ ಬಿದ್ದು ಯುವತಿ ಅನುಮಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ಬೆಂಗಳೂರು ಉತ್ತರ ತಾಲೂಕಿನ ಕಡಬಗೆರೆ ಜುನಿಫರ್ ಫಿಟ್ನೆಸ್ ಸೆಂಟರ್‌ನಲ್ಲಿ ಜರುಗಿದೆ. ರಿಸೆಪ್ಷನಿಸ್ಟ್ ರಕ್ಷಿತಾ (20) ಮೃತ ಯುವತಿ. ಇವರು ಫಿಟ್ನೆಸ್ ಸೆಂಟರ್ ಕಟ್ಟಡದಿಂದ ಬಿದ್ದು ಸಾವನ್ನಪ್ಪಿದ್ದಾರೆ. ಕಳೆದ ಎಂಟು ತಿಂಗಳಿಂದ ಫಿಟ್ನೆಸ್ ಸೆಂಟರ್‌ನಲ್ಲಿ ರಿಸೆಪ್ಷನಿಸ್ಟ್ ಆಗಿ ಯುವತಿ ಕಾರ್ಯನಿರ್ವಹಿಸುತ್ತಿದ್ದರು. ಇದ್ದಕ್ಕಿದ್ದಂತೆ ಫಿಟ್ನೆಸ್ ಸೆಂಟರ್ ನ ಮೂರನೇ ಕಟ್ಟಡದ ಮೇಲಿಂದ ಬಿದ್ದು ರಕ್ಷಿತಾ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸಾವಿಗೆ ಕಾರಣ ತಿಳಿದು ಬಂದಿಲ್ಲ.

ಘಟನೆ ಸಂಬಂಧ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರಿಂದ ತನಿಖೆ ಮುಂದುವರಿದಿದೆ.



ಬೆಂಗಳೂರಿನಿಂದ ಯಲವಗಿ ಮೂಲಕ ಸಂಚರಿಸುವ ಗೋಲಗುಂಬಜ್ ಎಕ್ಸ್‌ಪ್ರೆಸ್, ಜನ್ಮಶತಾಬ್ಧಿ ಎಕ್ಸ್‌ಪ್ರೆಸ್, ರಾಣಿ ಚನ್ನಮ್ಮ ಎಕ್ಸ್‌ಪ್ರೆಸ್, ವಾಸ್ಕೋಡಿಗಾಮಾ–ಯಶವಂತಪುರ ಎಕ್ಸ್‌ಪ್ರೆಸ್ ರೈಲುಗಳನ್ನು ಯಲವಗಿ ನಿಲ್ದಾಣದಲ್ಲಿ ನಿಲ್ಲಿಸುವ ವ್ಯವಸ್ಥೆ ಮಾಡಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಮಂಗಳವಾರ ದೆಹಲಿಯಲ್ಲಿ ಕೇಂದ್ರ ರೇಲ್ವೆ ಖಾತೆ ರಾಜ್ಯ ಸಚಿವರಾದ ವಿ.ಸೋಮಣ್ಣ ಅವರಿಗೆ ಮನವಿ ಸಲ್ಲಿಸಿದರು. ಈ ವೇಳೆ ಬಿಜೆಪಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಇದ್ದರು.

## ಸಾರಿಗೆ ನೌಕರರ ಮುಷ್ಕರ: ಪ್ರಯಾಣಿಕರ ಪರದಾಟ

▶▶ಮೊದಲನೇ ಪುಟದಿಂದ


ಮನಸ್ಸಿನಿಂದ ಬಸ್ ಓಡಿಸಲು ಮುಂದಾದ ಚಾಲಕರು ಬಸ್ ನಿಲ್ದಾಣದಲ್ಲಿ ದಿಕ್ಕುತೋಚದಂತೆ ನಿಂತಿದ್ದ ವಿದ್ಯಾರ್ಥಿಗಳನ್ನು ಅವರ ಗ್ರಾಮಕ್ಕೆ ಬಿಟ್ಟು ಬರುವ ಕಾರ್ಯ ಮಾಡಿದರು.

ಈ ವೇಳೆ ತಹಸೀಲ್ದಾರ ಧನಂಜಯ ಎಂ, ಪಿಎಸ್‌ಐ ನಾಗರಾಜ ಗಡಾದ, ಕ್ರೈಂ ಪಿಎಸ್‌ಐ ಟಿ.ಕೆ. ರಾಥೋಡ ಶಿಕ್ಷಣ ಇಲಾಖೆಯ ಈಶ್ವರ ಮೆಡ್ಲೇರಿ ಬಸ್ ನಿಲ್ದಾಣಕ್ಕೆ ಆಗಮಿಸಿ ಪರಿಸ್ಥಿತಿ ಪರಿಶೀಲಿಸಿದರು.



## ಪ್ರಯಾಣಿಕರಿಗೆ ತಟ್ಟಿದ ಮುಷ್ಕರದ ಬಿಸಿ

▶▶ಮೊದಲನೇ ಪುಟದಿಂದ




ಮುಷ್ಕರ ಹಿಂಪಡೆದ ಹಿನ್ನೆಲೆಯಲ್ಲಿ ಜಂಟಿ ಸಂಘಟನೆಗಳ ಪದಾಧಿಕಾರಿಗಳಾದ ಶಾಂತಣ್ಣ ಮುಳವಾಡ, ಬಿ.ಎಚ್. ರಾಮೇನಹಳ್ಳಿ, ಎಚ್.ಸಿ. ಕೊಪ್ಪಳ ಪ್ರತಿಕ್ರಿಯಿಸಿ, ಅತಿಕಡಿಮೆ ಸಂಬಳದಲ್ಲಿ ಶ್ರಮಪಟ್ಟು, ಹೆಚ್ಚು ಸಮಯ ದುಡಿಯುವ ಸಾರಿಗೆ ನೌಕರರ ವೇತನವನ್ನು ಸರ್ಕಾರ ಕೂಡಲೇ ಹೆಚ್ಚಿಸಬೇಕು.

38 ತಿಂಗಳ ಶೇ. 15ರ ವ್ಯತ್ಯಾಸದ ಹಣ ಹಾಗೂ 1–1–2024ರಿಂದ ಹೊಸ ವೇತನ ಪರಿಷ್ಕರಣೆ ಮಾಡಬೇಕು ಎಂದರು.

ಬಂದಿಳಿದರೂ, ಧಾರವಾಡ ಜಿಲ್ಲೆಯ ನವಲಗುಂದಕ್ಕೆ ಹೋಗಲು ಪರದಾಟ ನಡೆಸಿದರು. ಈ ಬಗ್ಗೆ ಖಾಸಗಿ ವಾಹನ ಚಾಲಕರನ್ನು ವಿಚಾರಿಸಿದರೆ, 20 ರೂ. ಹೆಚ್ಚುವರಿ ಪಡೆಯುತ್ತಿದೇವಷ್ಟೇ. ಪ್ರಯಾಣಿಕರು ಕಡಿಮೆ, ಡಿಸೇಲ್ ದರ ಜಾಸ್ತಿ ಇದ್ದು, ಎಂದಿನಂತೆಯೇ ಪ್ರಯಾಣಿಕರ ದಟ್ಟಣೆ ಇದ್ದರೆ ಮಾಮೂಲಿ ದರವನ್ನೇ ಪಡೆಯುತ್ತಿದ್ದೆವು ಎಂದು ಅಳಲು ತೋಡಿಕೊಂಡರು.

## ಪುರಾಣ–ಪ್ರವಚನ ಶ್ರವಣದಿಂದ ಜೀವನ ಸಮೃದ್ಧಿ



■ವಿಜಯಸಾಕ್ಷಿ ಸುದ್ದಿ, ರೋಣ

ಶ್ರಾವಣ ಮಾಸದ ಪವಿತ್ರ ತಿಂಗಳಲ್ಲಿ ಪುರಾಣ ಪ್ರವಚನ ಆಲಿಸುವದರಿಂದ ಜೀವನ ಸಮೃದ್ಧಿ ಹೊಂದಲಿದೆ ಎಂದು ಮಲ್ಲಯ್ಯಸ್ವಾಮಿ ಪುರಾಣಮಠ ಹೇಳಿದರು.

ಅವರು ತಾಲೂಕಿನ ಮಲ್ಲಾಪೂರ ಗ್ರಾಮದ ಕದಳಿ ಮಠದಲ್ಲಿ ಶ್ರಾವಣ ಮಾಸದ ನಿಮಿತ್ತ ಜರುಗಿದ ಕಲ್ಬುರ್ಗಿ ಶ್ರೀ ಶರಣಬಸವೇಶ್ವರರ ಪುರಾಣ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಕಲಬುರ್ಗಿ ಶ್ರೀ ಶರಣಬಸವೇಶ್ವರರು ಕಾಯಕ ಯೋಗಿಯಾಗಿದ್ದರು. ಅವರು ಕಾಯಕ ಮಾಡುವ ಮೂಲಕ ನಿರಂತರ ದಾಸೋಹಿಗಳಾಗಿ ದೇವ ಮಾನವರಾದರು. ಅಂತಹ ಪುಣ್ಯಾತ್ಮರ ವಾಣಿಗಳನ್ನು ಆಲಿಸಲು ಮಾನವರಾದ ನಾವು ಪುಣ್ಯ ಮಾಡಿರಬೇಕು. ಗ್ರಾಮದ ಜನರು ಶ್ರಾವಣ ಮಾಸದ ಪವಿತ್ರ ತಿಂಗಳನ್ನು ಭಕ್ತಿ ಭಾವದಿಂದ ಆಚರಿಸುವ ಮೂಲಕ ಕಾಯಕದೊಂದಿಗೆ ನಿರಂತರ ದಾಸೋಹಿಗಳಾಗಬೇಕು ಎಂದರು. ಶ್ರಾವಣ ಮಾಸ ಎನ್ನುವುದು ಮನುಷ್ಯನ ಮನಸ್ಸನ್ನು ಶುದ್ಧಗೊಳಿಸುವ ಪವಿತ್ರ ಹಬ್ಬ. ಕೇವಲ ಶ್ರಾವಣ ಮಾಸದಲ್ಲಿ ಶುದ್ಧವಾಗಿದ್ದರೆ ಸಾಲದು, ವರ್ಷದ 12 ತಿಂಗಳೂ ನಾವು ಒಳ್ಳೆಯವರಾಗಿ ಬದುಕಬೇಕು. ಬಡವರಿಗೆ, ನಿರ್ಗತಿಕರಿಗೆ ಸಹಾಯ ಹಸ್ತ ಚಾಚುವ ಮೂಲಕ ಸಮಾಜದಲ್ಲಿ ಗೌರವ ಸ್ಥಾನವನ್ನು ಗಳಿಸಬೇಕು ಎಂದರು.

ಈ ಸಂದರ್ಭದಲ್ಲಿ ಪುರಾಣ ಪ್ರವಚನಕಾರ ರೇವಣಸಿದ್ದೇಶ್ವರ ಶಾಸ್ತ್ರೀಗಳು, ಬಸಯ್ಯ ಸಾರಂಗಮಠ, ಮುತ್ತಪ್ಪ ಕರಿಯನ್ನವರ, ಬಸಯ್ಯ ಶಾಸ್ತ್ರೀಗಳು ಭಿಕ್ಷಾವತಿಮಠ, ರಾಜಶೇಖರ ಪುರಾಣಮಠ, ಶಂಕರ ಕಳಿಗನ್ನವರ ಸೇರಿದಂತೆ ಗ್ರಾ.ಪಂ ಸದಸ್ಯರು ಹಾಗೂ ಕದಳಿ ಮಠದ ಪದಾಧಿಕಾರಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

### ಶರಣ ಚರಿತಾಮೃತ ಪ್ರವಚನದಲ್ಲಿ ಜ. ವಚನಾನಂದ ಮಹಾಸ್ವಾಮಿಗಳು

# ಯೋಗವು ಪ್ರತಿಯೊಬ್ಬರಿಗೂ ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಗದಗ

ಯಾವುದೇ ರೋಗ ರುಜಿನಗಳು ಬರುವದನ್ನು ತಡೆಯುವ ಶಕ್ತಿ ಯೋಗಕ್ಕಿದೆ ಎಂದು ವೀರಶೈವ ಲಿಂಗಾಯತ ಪಂಚಮಸಾಲಿ ಹರಿಹರ ಪೀಠದ ಜಗದ್ಗುರು ವಚನಾನಂದ ಮಹಾಸ್ವಾಮಿಗಳು ನುಡಿದರು.

ನಗರದ ಶ್ರೀ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ನಡೆಯುತ್ತಿರುವ ಶರಣ ಚರಿತಾಮೃತ ಪ್ರವಚನವನ್ನು ಉದ್ದೇಶಿಸಿ ಶ್ರೀಗಳು ಮಾತನಾಡುತ್ತಿದ್ದರು.

ಯೋಗವು ಪ್ರತಿಯೊಬ್ಬರಿಗೂ ಬಹಳ ಅವಶ್ಯವಾಗಿದ್ದು, ಅದನ್ನು ಮಾಡುತ್ತಾ ಹೋದರೆ ರೋಗ ರುಜಿನಗಳು ದೂರವಾಗುವವು. ಕಲ್ಯಾಣದಲ್ಲಿ 770 ಜನ ಶರಣರಿದ್ದರು. ಜಗತ್ತಿನ ಇತಿಹಾಸದಲ್ಲಿ ಇಷ್ಟೊಂದು ಜನ ಶರಣರು ಇದ್ದಿದ್ದು ಕಲ್ಯಾಣದಲ್ಲಿ ಮಾತ್ರ. ಎಲ್ಲ ಶರಣರು ಕೂಡಾ ಅಂದಿನ ಕಾಲಕ್ಕೆ ತಕ್ಕಹಾಗೆ ಯೋವನ್ನು ಮಾಡುತ್ತಿದ್ದರು. ಶರಣೆ ಸಜ್ಜಲಗುಡ್ಡದ ಶರಣಮ್ಮನವರು ಒಬ್ಬ ಸಾಮಾನ್ಯ ಸ್ತ್ರೀ, ಅವರು ಗುರುಗಳಿಂದ ದೀಕ್ಷೆಯನ್ನು ಪಡೆದುಕೊಂಡು ಒಬ್ಬ ದೊಡ್ಡ ಶರಣೆಯಾದರು. ಶರಣಮ್ಮರೂ ಕೂಡಾ ಯೋಗಕ್ಕೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಿದ್ದರು ಎಂದರು.



ಇಂದಿನ ಕಾಲದಲ್ಲಿ ಸ್ನಾನ ಮಾಡಲು ಗುಳಿಗೆ ಬಂದಿವೆ. ಊಟ ಮಾಡಲು ಗುಳಿಗೆ ಬಂದಿವೆ. ರಕ್ತದೊತ್ತಡ ಹೆಚ್ಚು–ಕಡಿಮೆ ಆದರೂ ಗುಳಿಗೆಗಳು ಬಂದಿವೆ. ಪ್ರತಿಯೊಂದು ರೋಗಕ್ಕೂ ಇಂದು ಮನುಷ್ಯ ಗುಳಿಗೆಯ ಮೇಲೆ ಅವಲಂಬಿತನಾಗಿದ್ದಾನೆ. ಯೋಗ ಮಾಡುವುದರಿಂದ ಎಲ್ಲ ರೋಗಗಳನ್ನು ತಡೆಯಬಹುದು. ಹಸಿವೆಯಾಗದೇ ಊಟ ಮಾಡಬಾರದು. ಎಷ್ಟು ಬೇಕು ಅಷ್ಟನ್ನೇ ತಿನ್ನಬೇಕು. ಖಾದ್ಯ ಪದಾರ್ಥಗಳನ್ನು ಹೆಚ್ಚಿಗೆ ಸೇವಿಸಬಾರದು. ಮಲಗುವಾಗ ಬಲಭುಜ ಮೇಲೆ ಮಾಡಿ ಮಲಗಿಕೊಳ್ಳಬೇಕು. ಊಟ ಆದ ನಂತರ ನೂರು ಹೆಜ್ಜೆಯನ್ನು ನಡೆಯಬೇಕು ಎಂದು ತಿಳಿಸಿದರು.

ಶರಣೆ ನೀಲಮ್ಮತಾಯಿಯವರು ಮಾತನಾಡುತ್ತಾ, 12ನೇ ಶನಮಾನದಲ್ಲಿ ಶರಣರು ಸ್ತ್ರೀಯರಿಗೆ ಸಮಾನ ಅವಕಾಶ ಕೊಟ್ಟಿದ್ದರು. ಕಲ್ಯಾಣ ಅಂದರೆ ಸದ್ಗುಣ. ಪರಮಾತ್ಮನಲ್ಲಿ ಎರಡು ಶಕ್ತಿಗಳು ಇರುವವು. ಶರಣರ ಮುಖಾಂತರ ಬರುವ ಹಿತನುಡಿಗಳು ಕಾಲಕ್ಕೆ ತಕ್ಕಂತೆ ಪರಮಾತ್ಮನ ವಿಶೇಷ ಶಕ್ತಿಯಾಗಿ ಬರುವರು ಎಂದರು.

ಸಭೆಯ ಅಧ್ಯಕ್ಷತೆಯನ್ನು ಟ್ರಸ್ಟ್ ಕಮಿಟಿಯ ಹಿರಿಯ ಸದಸ್ಯ ಕೊಟ್ರಪ್ಪ ಕಮತರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ರಾಜ್ಯ ಪಂಚಮಸಾಲಿ ಸಮಾಜದ ಅಧ್ಯಕ್ಷ ಸೋಮನಗೌಡ ಮಾಲಿಪಾಟೀಲ, ಜಿಲ್ಲಾ ಪಂಚಮಸಾಲಿ ಸಮಾಜದ ಅಧ್ಯಕ್ಷ ಈರಣ್ಣ ಕರಬಿಷ್ಠಿ ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಚೇಂಬರ್ ಆಫ್ ಕಾಮರ್ಸ್ ಹುಬ್ಬಳ್ಳಿ ಇವರಿಂದ ವಾಣಿಜ್ಯ ರತ್ನ ಪ್ರಶಸ್ತಿ ಪಡೆದ ರಾಜು ಗುಡಿಮನಿಯವರನ್ನು ಸತ್ಕರಿಸಲಾಯಿತು.

ಈ ಸಂದರ್ಭದಲ್ಲಿ ಹಿರಿಯರಾದ ಎಂ.ಎಂ. ಹಿರೇಮಠ ವಕೀಲರು, ಶಿವಣ್ಣ ಕತ್ತಿ, ವಿರೂಪಾಕ್ಷಪ್ಪ ಅಕ್ಕಿ, ಬಸವರಾಜ ಜಂತ್ಲಿ, ಶಿವಣ್ಣ ಇಟ್ನಳ್ಳಿ, ಪುರಾಣ ಪ್ರವಚನ ಸಮಿತಿ ಅಧ್ಯಕ್ಷ ಶೇಖಪ್ಪ ಹೊಂಬಳ, ಸಿದ್ದಣ್ಣ ಅರಳಿ, ಗಂಗಾಧರ ಮೇಲಗಿರಿ, ಗಂಗಾಧರ ನಂದಿಕೋಲಮಠ, ಶ್ರೀಶೈಲಪ್ಪ ಪಟ್ಟಣಶೆಟ್ಟಿ, ವಿರೂಪಾಕ್ಷಪ್ಪ ಅಂಗಡಿ, ಮಲ್ಲಿಕಾರ್ಜುನ ಹಿರೇಮಠ, ಶಂಕರ ನೀರಲಕೇರಿ, ಪಂಚಾಕ್ಷರ ಅಂಗಡಿ, ನವೀನ ನಾಲ್ವಾಡ, ಸುರೇಶ ಹೆಬಸೂರ, ಪ್ರಕಾಶ ಜಂತ್ಲಿ, ಸತ್ಸಂಗದ ಸದಸ್ಯರಾದ ಸುನಂದಾ ಜೋಬಾಳೆ, ಬೀನಾ ಮಾನ್ವಿ, ಉಮಾ ಪಟ್ಟಣಶೆಟ್ಟಿ, ಜಯಶ್ರೀ ನಿಲೂಗಲ್, ಕಸ್ತೂರಕ್ಕ ಮಾನ್ವಿ, ಶರಣಮ್ಮ ಶಿರೂರ, ಸುಶೀಲಾ ನಿಲೂಗಲ್ಲ, ನೀಲಕ್ಕ ಕಗನಳ್ಳಿ, ಅನಸಕ್ಕ ಮೇಲಗಿರಿ, ಕಲ್ಪನಾ ಹಿರೇಮಠ, ಸರಸ್ವತಿ ನಂದಿಕೋಲಮಠ, ಶೈಲಾ ಮಾನ್ವಿ ಮುತಾದವರು ಭಾಗವಹಿಸಿದ್ದರು.

## ಬಸ್ ಸಂಚಾರ ಸ್ಥಗಿತ: ಪ್ರಯಾಣಿಕರ ಪರದಾಟ



■ವಿಜಯಸಾಕ್ಷಿ ಸುದ್ದಿ, ರೋಣ

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮಂಗಳವಾರ ಸಾರಿಗೆ ನೌಕರರು ಮುಷ್ಕರದಲ್ಲಿ ಭಾಗಿಯಾದ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಪ್ರಯಾಣಿಕರು ಪರದಾಡುವಂತಾಯಿತು.

ಮುಷ್ಕರದ ಅರಿವು ಇರದ ಕೆಲ ಪ್ರಯಾಣಿಕರು ಪಟ್ಟಣಕ್ಕೆ ಬಂದು ಪರದಾಡಿದರು. ಗ್ರಾಮೀಣ ಭಾಗಗಳ ವಿದ್ಯಾರ್ಥಿಗಳು ಸಹ ಬೆಳಗಿನ ಬಸ್‌ಗಳ ಮೂಲಕ ಶಾಲಾ-ಕಾಲೇಜುಗಳಿಗೆ ಆಗಮಿಸಿ, ಶಾಲಾ ಕಾಲೇಜುಗಳು ಬಿಟ್ಟ ನಂತರ ಮನೆಗೆ ತೆರಳಲು ತೊಂದರೆ ಅನುಭವಿಸಿದರು. ಬಸ್ ಸಂಚಾರ ಸ್ಥಗೀತಗೊಂಡ ಹಿನ್ನೆಲೆಯಲ್ಲಿ ಪಟ್ಟಣ ಜನರಿಲ್ಲದೆ ಬಿಕೋ ಎನ್ನುತ್ತಿತ್ತು.

ಮಧ್ಯಾಹ್ನದ ವೇಳೆಗೆ ಖಾಸಗಿ ವಾಹನಗಳ ಮೂಲಕ ಪ್ರಯಾಣಿಕರು ತಮ್ಮ ಗ್ರಾಮಗಳಿಗೆ ತಲುಪಿದರು. ಸಾರಿಗೆ ನೌಕರರ ಮುಷ್ಕರದಿಂದ ಪ್ರಯಾಣಿಕರಿಗೆ ತೊಂದರೆಯಾಗಬಾರದು ಎಂಬ ಉದ್ದೇಶದಿಂದ ಬೆಳಗಿನ ಜಾವ 5 ಗಂಟೆಗೇ ಆಗಮಿಸಿದ್ದ ಪಿಎಸ್‌ಐ ಪ್ರಕಾಶ ಬಣಕಾರ, ಪ್ರಯಾಣಿಕರನ್ನು ಖಾಸಗಿ ವಾಹನಗಳು ನಿಲ್ಲುವ ಸ್ಥಳಗಳಿಗೆ ಕಳುಹಿಸಿ ಮಾರ್ಗದರ್ಶನ, ಮಾಹಿತಿ ನೀಡಿದರು.

ಪ.ಪಂ ಕಚೇರಿಯಲ್ಲಿ ಜರುಗಿದ ಸಾಮಾನ್ಯ ಸಭೆ । ಇಂಜಿನಿಯರ್‌ಗೆ ಹೊಸ ಬಡಾವಣೆಗಳ ಮಾಹಿತಿಯಿಲ್ಲ

# ಉತಾರ ಪೂರೈಕೆಯ ನಿಗೂಢ ರಹಸ್ಯ!

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇತ್ತೀಚಿನ ದಿನಗಳಲ್ಲಿ ಶಿರಹಟ್ಟಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಹಲವು ಲೇಔಟ್‌ಗಳು ನಿರ್ಮಾಣವಾಗಿದ್ದು, ಇದರ ಸಂಪೂರ್ಣ ಮಾಹಿತಿ ಪ.ಪಂ ಕಚೇರಿಯಲ್ಲಿಲ್ಲ. ಎಷ್ಟು ಉತಾರಗಳನ್ನು ಪೂರೈಸಿದೆ ಎಂಬುದರ ಬಗ್ಗೆ ಸ್ಪಷ್ಟ ಮಾಹಿತಿ ಇಲ್ಲ ಎಂದು ಪ.ಪಂ ಅಧ್ಯಕ್ಷೆ ದೇವಕ್ಕ ಗುಡಿಮನಿ, ಉಪಾಧ್ಯಕ್ಷೆ ನೀಲವ್ವ ಹುಬ್ಬಳ್ಳಿ, ಸ್ಥಾಯಿ ಸಮಿತಿ ಅಧ್ಯಕ್ಷ ಹೊನ್ನಪ್ಪ ಶಿರಹಟ್ಟಿ ಸಿಬ್ಬಂದಿಗಳ ನಿರ್ಲಕ್ಷ್ಯ ಹಾಗೂ ಬೇಜವಾಬ್ದಾರಿಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಅವರು ಮಂಗಳವಾರ ಶಿರಹಟ್ಟಿಯ ಪ.ಪಂ ಕಚೇರಿಯಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಮಾತನಾಡಿದರು.

ಸಾಮಾನ್ಯ ಸಭೆ ನಿಗದಿಪಡಿಸಿದ್ದರೂ ಸಹ ಲೇಔಟ್‌ಗಳ ಬಗ್ಗೆ ಮಾಹಿತಿ ನೀಡಬೇಕಿದ್ದ ಆರ್‌ಐ ಮತ್ತು ಕೇಸ್ ವರ್ಕರ್ ಗೈರು ಹಾಜರಾಗಿದ್ದು, ಸಭೆ ನಡೆಸುವುದು ಸೂಕ್ತವಲ್ಲ. ಇನ್ನು 3 ದಿನಗಳ ಒಳಗಾಗಿ ಮತ್ತೆ ಸಭೆ ಕರೆಯಲು ಮುಖ್ಯಾಧಿಕಾರಿಗೆ ಸೂಚಿಸಿದರು.

ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಹೊಸದಾಗಿ ನಿರ್ಮಾಣವಾದ ಲೇಔಟ್‌ಗಳ ಸಂಖ್ಯೆ ಎಷ್ಟು, ಅಲ್ಲಿ ಮೂಲ ಸೌಕರ್ಯ ಒದಗಿಸಲಾಗಿದೆಯೇ, ಇಲ್ಲಿಯವರೆಗೂ ಎಷ್ಟು ಪ್ರಮಾಣ ಉತಾರ ಪೂರೈಸಿದೆ ಎಂಬುದನ್ನು ಸದಸ್ಯರು ಇಂಜಿನಿಯರ್ ಬಳಿ ಕೇಳಿದರೆ ತಮಗೆ ಲೇಔಟ್‌ಗಳ ಮಾಹಿತಿ ಇಲ್ಲ ಎಂದರು. ಹೀಗಾದರೆ ಶಿರಹಟ್ಟಿಯಲ್ಲಿ ಏನು ಮಾಡಿದರೂ ನಡೆಯುತ್ತದೆಯೇ ಎಂದು ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು.

ಶಿರಹಟ್ಟಿ ಪ.ಪಂ ವ್ಯಾಪ್ತಿಯಲ್ಲಿಯ ಬಹುತೇಕ ಲೇಔಟ್‌ಗಳಲ್ಲಿ ಯಾವುದೇ ಮೂಲಸೌಕರ್ಯ ಒದಗಿಸದೇ ನಿತ್ಯವೂ ಉತಾರ ಪೂರೈಸುತ್ತಿದ್ದಾರೆ. ಅಧ್ಯಕ್ಷ-ಉಪಾಧ್ಯಕ್ಷ ಮತ್ತು ಸ್ಥಾಯಿ ಸಮಿತಿ ಗಮನಕ್ಕೆ ತರದೇ ಖರ್ಚು-ವೆಚ್ಚಗಳನ್ನು ನಿರ್ವಹಿಸುತ್ತಿದ್ದಾರೆ. ನಿಗದಿತ ಸಮಯದಲ್ಲಿ ಸಭೆಗಳನ್ನು ನಡೆಸುತ್ತಿಲ್ಲ, ಸಾರ್ವಜನಿಕರಿಗೆ ಇಲ್ಲಿಯ ಅಧಿಕಾರಿಗಳು ಸಕಾಲಕ್ಕೆ ಸಿಗುತ್ತಿಲ್ಲ, ಇಂಜಿನಿಯರ್ ಲಾಗಿನ್ ಬೇರೆಯವರು ಉಪಯೋಗಿಸುತ್ತಿದ್ದಾರೆ. ಹೀಗೆ ಸರ್ವಾಧಿಕಾರಿ ಧೋರಣೆ ಮುಂದುವರೆದು ಹಲವು ಗೊಂದಲಗಳ ಗೂಡಾದ ಕಚೇರಿಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಬೇಕೆಂದು ಸದಸ್ಯರು ಒತ್ತಾಯಿಸಿದರು.

ಅಧ್ಯಕ್ಷೆ ದೇವಕ್ಕ ಗುಡಿಮನಿ, ಉಪಾಧ್ಯಕ್ಷೆ ನೀಲವ್ವ ಹುಬ್ಬಳ್ಳಿ, ಸ್ಥಾಯಿ ಸಮಿತಿ ಅಧ್ಯಕ್ಷ ಹೊನ್ನಪ್ಪ ಶಿರಹಟ್ಟಿ, ಸದಸ್ಯರಾದ ಸಂದೀಪ ಕಪ್ಪತ್ತನವರ, ಪರಮೇಶ ಪರಬ, ಫಕ್ಕೀರೇಶ ರಟ್ಟಿಹಳ್ಳಿ, ಅಶ್ರತಅಲಿ ಢಾಲಾಯತ, ನಾಮನಿರ್ದೇಶಿತ ಸದಸ್ಯ ಅಲ್ಲಾಭಕ್ಷಿ ನಗಾರಿ, ಸೋಮನಗೌಡ ಮರಿಗೌಡ, ಮುಖ್ಯಾಧಿಕಾರಿ ಸವಿತಾ ತಾಂಬ್ರೆ ಮುಂತಾದವರು ಉಪಸ್ಥಿತರಿದ್ದರು.



ಹೊಸದಾಗಿ ನಿರ್ಮಾಣವಾಗುತ್ತಿರುವ ಬಡಾವಣೆಗಳಲ್ಲಿ ಅಗತ್ಯ ಮೂಲಸೌಕರ್ಯ ಒದಗಿಸದೇ ಇರುವುದರಿಂದ ಉತಾರ ನೀಡದಂತೆ ಹಿಂದಿನ ಸಭೆಯಲ್ಲಿ ಠರಾವು ಪಾಸ್ ಮಾಡಿದ್ದರೂ ಸಹ ಹೊಸದಾಗಿ ಉತಾರಗಳನ್ನು ನೀಡಲಾಗುತ್ತಿದೆ. ಈ ಬಗ್ಗೆ ಚುನಾಯಿತ ಪ್ರತಿನಿಧಿಗಳನ್ನು ಕೇಳದೇ ತಮಗಿಷ್ಟ ಬಂದಂತೆ ಇಲ್ಲಿಯ ಸಿಬ್ಬಂದಿಗಳು ಕೆಲಸ ಮಾಡುತ್ತಿದ್ದಾರೆ. ಈ ಬಗ್ಗೆ ಶೀಘ್ರವೇ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ವರದಿ ಸಲ್ಲಿಸಲಾಗುವುದು ಎಂದು ಸ್ಥಾಯಿ ಸಮಿತಿ ಅಧ್ಯಕ್ಷ ಹೊನ್ನಪ್ಪ ಶಿರಹಟ್ಟಿ ಹೇಳಿದರು.

'ಗದಗ ಉತ್ಸವ-2025' ಅಂಗವಾಗಿ ಕ್ರಿಕೆಟ್ ಟೂರ್ನಾಮೆಂಟ್

# ಸತತ ಪರಿಶ್ರಮದಿಂದ ಸಾಧನೆ ಸಾಧ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡೆ ಪ್ರತಿಯೊಬ್ಬ ವ್ಯಕ್ತಿಗೂ ಅವಶ್ಯಕವಾಗಿದ್ದು, ಆರೋಗ್ಯಕರ ಜೀವನಕ್ಕೆ ಉತ್ತಮ ವ್ಯಾಯಾಮ ನೀಡುತ್ತದೆ. ಕ್ರೀಡೆಯಲ್ಲಿ ಸೋಲು-ಗೆಲುವನ್ನು ಸಹಜವಾಗಿ ಸ್ವೀಕರಿಸಬೇಕು. ಸತತ ಪರಿಶ್ರಮದಿಂದ ಜೀವನದಲ್ಲಿ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಕೆಟ್ಟ ಚಟಗಳಿಗೆ ಬಲಿಯಾಗದೇ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಅಂತಾರಾಷ್ಟ್ರೀಯ ಕ್ರಿಕೆಟ್ ಆಟಗಾರ, ತರಬೇತಿದಾರ ಸುನೀಲ ಜೋಶಿ ಹೇಳಿದರು.

ಅಖಿಲ ಕರ್ನಾಟಕ ವಾಣಿಜ್ಯೋದ್ಯಮಿಗಳ ಸಮ್ಮೇಳನ, ಕೈಗಾರಿಕಾ ವಸ್ತುಪ್ರದರ್ಶನ ಹಾಗೂ ಮಾರಾಟಗಳ 'ಗದಗ ಉತ್ಸವ-2025' ಅಂಗವಾಗಿ ಹಮ್ಮಿಕೊಂಡಿದ್ದ ಕ್ರಿಕೆಟ್ ಟೂರ್ನಾಮೆಂಟ್‌ನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಮಾತನಾಡಿ, ನಾವು ನಮ್ಮ ಆರೋಗ್ಯ ವೃದ್ಧಿಗೆ ಕ್ರೀಡೆಯಲ್ಲಿ ಪಾಲ್ಗೊಳ್ಳುವುದು ಅವಶ್ಯವಾಗಿದೆ. ಮೊದಲು ನಾವು ಆರೋಗ್ಯದ ಕಡೆಗೆ ಹೆಚ್ಚಿನ ಗಮನ ನೀಡಬೇಕು. ಸಂಸ್ಥೆಯವರು ಸುವರ್ಣ ಮಹೋತ್ಸವದ ಅಂಗವಾಗಿ ಕ್ರೀಡಾ ಚಟುವಟಿಕೆಯನ್ನು ಏರ್ಪಡಿಸಿರುವುದು ಪ್ರಶಂಸನೀಯ ಎಂದರು.

ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಪ್ರತಿಯೊಬ್ಬರೂ ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ದೈಹಿಕವಾಗಿ ಹಾಗೂ ಮಾನಸಿಕವಾಗಿ ಸದೃಢವಾಗಿ ಇರಲು ಸಾಧ್ಯವಾಗುತ್ತದೆ. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯವರು ವ್ಯಾಪಾರ ಮತ್ತು ಉದ್ದಿಮೆಗಳ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಗದಗ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸುತ್ತಿರುವುದು ಶ್ಲಾಘನೀಯ ಎಂದರು. ಮತ್ತೋರ್ವ ಮುಖ್ಯ ಅತಿಥಿಗಳಾದ ಆಗಮಿಸಿದ ಗದಗ ನಗರದ ಮೂತ್ರಪಿಂಡ ಹಾಗೂ ಮೂತ್ರರೋಗ ಶಸ್ತ್ರಚಿಕಿತ್ಸಕರಾದ ಡಾ. ಶರಣ ಬಿ.ಆಲೂರ ಮಾತನಾಡಿ, ಪ್ರತಿಯೊಬ್ಬರಿಗೂ ಆರೋಗ್ಯ ಮುಖ್ಯ. ಅದನ್ನು ಕಾಪಾಡಿಕೊಳ್ಳಲು ಇಂತಹ ಕ್ರೀಡಾ ಚಟುವಟಿಕೆಯಲ್ಲಿ ಪಾಲ್ಗೊಳ್ಳಬೇಕೆಂದು ತಿಳಿಸಿದರು.

ಕ್ರೀಡಾ ಕೂಟದ ಚೇರಮನ್ ಶರಣು ಪ್ಹಿ.ಗದಗ ಸ್ವಾಗತಿಸಿದರು. ಕ್ರಿಕೆಟ್ ಪಂದ್ಯದಲ್ಲಿ ವಿಜೇತರಾದ ಗ್ರೇನ್ ಮಾರ್ಕೆಟ್ ತಂಡದ ಅಧ್ಯಕ್ಷ ರಾಜಣ್ಣ ಮಲ್ಲಾಡದ ಹಾಗೂ ದ್ವಿತೀಯ ಬಹುಮಾನವನ್ನು ಎ.ಪಿ.ಎಂ.ಸಿ ತಂಡದ ನಾಯಕ ಶಂಬು ಪಟ್ಟದಕಲ್ಲು ಅವರಿಗೆ ಸುನೀಲ ಜೋಶಿ ಟ್ರೋಫಿ ನೀಡಿ ಸನ್ಮಾನಿಸಿ ಗೌರವಿಸಿದರು. ಗದಗ ಉತ್ಸವ-2025ರ ಚೇರಮನ್ ಆನಂದ ಎಲ್.ಪೊತ್ನೀಸ್, ಕ್ರಿಕೆಟ್ ತರಬೇತುದಾರ ಪ್ರೊ. ಎಸ್.ಎಲ್. ಗುಳೇದಗುಡ್ಡ, ಕ್ರೀಡಾ ಉಪಸಮಿತಿ ಚೇರಮನ್ ಪ್ರಮೋದ್ ವಾರಕರ ಉಪಸ್ಥಿತರಿದ್ದರು. ಕ್ರಿಕೆಟ್ ಪಂದ್ಯಾವಳಿಯನ್ನು ಸೋಮು ಅಂಗಡಿ ನಿರ್ವಹಿಸಿದರು. ಸಂಸ್ಥೆಯ ಸದಸ್ಯ ರಮೇಶ ಶಿಗ್ಲಿ ಪ್ರಾರ್ಥಿಸಿದರು. ಉಪ ಸಮಿತಿ ಚೇರಮನ್ ಶರಣು ಪ್ಹಿ.ಗದಗ ಸ್ವಾಗತಿಸಿದರು. ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ನಿರೂಪಿಸಿದರು. ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ ಎಸ್. ಗುಡಿಮನಿ ವಂದಿಸಿದರು ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ತಿಳಿಸಿದ್ದಾರೆ.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಮಾತನಾಡಿ, ನಮ್ಮ ಸಂಸ್ಥೆಯ ಸದಸ್ಯರು ಒತ್ತಡದ ಬದುಕಿನಿಂದ ಕೇವಲ ವ್ಯಾಪಾರದ ಕಡೆಗೆ ಗಮನ ವಹಿಸುತ್ತಾ ಬರುತ್ತಾರೆ. ಈ ನಿಟ್ಟಿನಲ್ಲಿ ವ್ಯಾಪಾರಸ್ಥರ ಆರೋಗ್ಯದ ಕಡೆಗೆ ಗಮನ ನೀಡುವುದರೊಂದಿಗೆ ಅವರನ್ನು ಮಾಸಿಕ ಹಾಗೂ ದೈಹಿಕ ಒತ್ತಡದ ಜೀವನದಿಂದ ಹೊರತರುವ ಉದ್ದೇಶದಿಂದ ಸಂಸ್ಥೆಯಿಂದ ಪ್ರಪ್ರಥಮವಾಗಿ ಕ್ರೀಡಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

# ಸಂಭ್ರಮದ ಶ್ರೀ ವೀರಭದ್ರೇಶ್ವರ ಅಗ್ನಿಮಹೋತ್ಸವ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸಮೀಪದ ಹರಿಪೂರ ಗ್ರಾಮದಲ್ಲಿ ಶ್ರಾವಣ ಮಾಸದ 2ನೇ ಮಂಗಳವಾರ ಶ್ರೀ ಶಂಕರಲಿಂಗೇಶ್ವರ ಹಾಗೂ ಶ್ರೀ ವೀರಭದ್ರೇಶ್ವರ ಸೇವಾ ಟ್ರಸ್ಟ್ ಕಮಿಟಿ ವತಿಯಿಂದ ಶ್ರೀ ವೀರಭದ್ರೇಶ್ವರ ದೇವರ 37ನೇ ವರ್ಷದ ಅಗ್ನಿಮಹೋತ್ಸವವು ಸಡಗರ-ಸಂಭ್ರಮದಿಂದ ಜರುಗಿತು.

ಬೆಳಿಗ್ಗೆ 6 ಗಂಟೆಗೆ ಶ್ರೀ ಶಂಕರಲಿಂಗೇಶ್ವರ ಹಾಗೂ ಶ್ರೀ ವೀರಭದ್ರೇಶ್ವರ ದೇವರಿಗೆ ಮಹಾರುದ್ರಾಭಿಷೇಕ ನೆರವೇರಿತು. 8 ಗಂಟೆಗೆ ಶ್ರೀ ವೀರಭದ್ರ ದೇವರ ಪಲ್ಲಕ್ಕಿ ಉತ್ಸವವು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಈ ಸಂದರ್ಭದಲ್ಲಿ ಪುರವಂತರು ವೀರಭದ್ರ ದೇವರ ವಚನಗಳನ್ನು ಹೇಳುತ್ತಾ, ಗಲ್ಲ, ತುಟಿ, ಹೊಟ್ಟೆ, ಗಂಟಲು, ನಾಲಿಗೆಗೆ ಶಸ್ತ್ರಗಳನ್ನು ಧರಿಸಿ ತಮ್ಮ ಭಕ್ತಿಯನ್ನು ಮೆರೆದರು.

ನಂದಿಧ್ವಜ, ಸಮ್ಮಾಳ ಮತ್ತು ಸಕಲ ವಾದ್ಯಗೋಷ್ಠಿಗಳಿಂದ ಭವ್ಯ ಮೆರವಣಿಗೆಯು ನಡೆದು ಮಧ್ಯಾಹ್ನ 2ರ ಸುಮಾರಿಗೆ ದೇವಸ್ಥಾನದ ಆವರಣದಲ್ಲಿಯ ಅಗ್ನಿಕುಂಡದಲ್ಲಿ ಭಕ್ತರು ಅಗ್ನಿಯನ್ನು ಹಾಯ್ದು ತಮ್ಮ ಭಕ್ತಿಯನ್ನು ಸಮರ್ಪಿಸಿದರು. ನಂತರ ಅನ್ನಸಂತರ್ಪಣೆ ಜರುಗಿ-ತು. ಈ ಸಂದರ್ಭದಲ್ಲಿ ಶಂಕ್ರಪ್ಪ ಕಾಳಗಿ, ಶ್ರೀಶೈಲ ಮಣ್ಣೂರ, ವೀರೇಶ ದೇಸಾಯಿಪಟ್ಟಿ ಚಂದ್ರು ಕಾಳಗಿ, ಸಿ.ಪಿ. ಕಾಳಗಿ, ಶಂಭು ಕಾಳಗಿ, ಬಸವರಾಜ ದೇಸಾಯಿಪಟ್ಟಿ, ವಿಜಯಕುಮಾರ ದೇಸಾಯಿಪಟ್ಟಿ, ಬಸವರಾಜ ಮೂರಶಿಳ್ಳಿ, ಪ್ರಸನ್ನ ಮೂರಶಿಳ್ಳಿ, ಪ್ರಶಾಂತ ಕಾಳಗಿ, ಎಂ.ಪಿ. ಕಲ್ಮಠ ಮುಂತಾದವರು ಉಪಸ್ಥಿತರಿದ್ದರು.

# ಜಿಲ್ಲಾ ಕಾರಾಗೃಹದಲ್ಲಿ ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ತು ಮತ್ತು ತಾಲೂಕಾ ಕದಳಿ ಮಹಿಳಾ ವೇದಿಕೆ ಗದಗ ಇವುಗಳ ಸಂಯುಕ್ತಾಶ್ರಯದಲ್ಲಿ ಶ್ರಾವಣ ಮಾಸದ ಪ್ರಯುಕ್ತ 'ಮನ ಪರಿವರ್ತನೆಯಲ್ಲಿ ವಚನಗಳ ಪಾತ್ರ' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಆ. 6ರ ಮುಂಜಾನೆ 11.30 ಗಂಟೆಗೆ ಜಿಲ್ಲಾ ಕಾರಾಗೃಹದಲ್ಲಿ ಏರ್ಪಡಿಸಲಾಗಿದೆ.

ಉದ್ಘಾಟಕರಾಗಿ ಜಿಲ್ಲಾ ಕಾರಾಗೃಹದ ಅಧೀಕ್ಷಕ ಈರಪ್ಪ ರಂಗಾಪೂರ ಆಗಮಿಸುವರು. ಅಧ್ಯಕ್ಷತೆಯನ್ನು ಗದಗ ತಾಲೂಕಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಸುಲೋಚನಾ ಎಮ್. ಐಹೊಳ್ಳಿ ವಹಿಸಿಕೊಳ್ಳುವರು. ಪ್ರಾಚಾರ್ಯ ಡಾ. ರಾಜಶೇಖರ ದಾನರಡ್ಡಿ, ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ಉಪನ್ಯಾಸ ನೀಡುವರು.


ಗದಗ ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರಕಾಶ ಟಿ.ಅಸುಂಡಿ ಹಾಗೂ ಬಸವದಳದ ಅಧ್ಯಕ್ಷ ವಿ.ಕೆ. ಕರೇಗೌಡ್ರ ಉಪಸ್ಥಿತರಿರುವರು. ಗದಗ ಜಿಲ್ಲಾ ಮತ್ತು ಗದಗ ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಸದಸ್ಯರು ಹಾಗೂ ಗದಗ ಜಿಲ್ಲಾ ಮತ್ತು ಗದಗ ತಾಲೂಕ ಕದಳಿ ಮಹಿಳಾ ವೇದಿಕೆಯ ಸದಸ್ಯರು, ಆಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಶ.ಸಾ.ಪ ಕಾರ್ಯದರ್ಶಿ ಪ್ರೊ. ಎಸ್.ಯು. ಸಜ್ಜನಶೆಟ್ಟರ, ಕದಳಿ ಮಹಿಳಾ ವೇದಿಕೆಯ ಕಾರ್ಯದರ್ಶಿ ಜ್ಯೋತಿ ಎಸ್. ಹೇರಲಗಿ ವಿನಂತಿಸಿದ್ದಾರೆ.

# ಬಸ್ ಸಂಚಾರವಿಲ್ಲದೇ ಅವ್ಯವಸ್ಥೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಾರಿಗೆ ನೌಕರರ ಮುಷ್ಕರದ ಹಿನ್ನೆಲೆಯಲ್ಲಿ ಮಂಗಳವಾರ ಬಸ್‌ಗಳ ಸಂಚಾರವಿಲ್ಲದೆ, ಪ್ರಯಾಣಿಕರ ಓಡಾಟವಿಲ್ಲದೆ ನರೇಗಲ್ಲ ಬಸ್ ನಿಲ್ದಾಣ ಬಿಕೋ ಎನ್ನುತ್ತಿತ್ತು. ಗದಗ ಜಿಲ್ಲಾ ಸಾರಿಗೆ ನಿಯಂತ್ರಕರು ತಮ್ಮ ಆಧೀನದಲ್ಲಿ ಬರುವ 8 ಡಿಪೋಗಳ ನೌಕರರಿಗೆ ಕೆಲಸಕ್ಕೆ ಹಾಜರಾಗಲು ತಿಳಿಸಿದ್ದರೂ ನೌಕರರು ಮುಷ್ಕರದಲ್ಲಿ ಪಾಲ್ಗೊಂಡಿದ್ದರಿಂದ ಸಾರಿಗೆ ವ್ಯವಸ್ಥೆಯಲ್ಲಿ ಅವ್ಯವಸ್ಥೆ ಉಂಟಾಗಿತ್ತು.

ಎಂದಿನಂತೆ ಬಸ್ ಸೌಲಭ್ಯವನ್ನು ಅವಲಂಬಿಸಿ ಶಾಲೆ ಕಾಲೇಜುಗಳಿಗೆ ತೆರಳುತ್ತಿದ್ದ ವಿದ್ಯಾರ್ಥಿಗಳಿಗೆ ಸಾರಿಗೆ ನೌಕರರ ಮುಷ್ಕರ ದೊಡ್ಡ ಆಘಾತ ನೀಡಿತು. ವೈದ್ಯಕೀಯ ಸೇವೆಗಾಗಿ ನರೇಗಲ್ಲನ್ನೇ ಆಶ್ರಯಿಸಿದ್ದ ಸುತ್ತಲಿನ ಅನೇಕ ಹಳ್ಳಿಗಳ ಗ್ರಾಮಸ್ಥರು, ಪಕ್ಕದ ಕೊಪ್ಪಳ ಜಿಲ್ಲೆಯ ತೊಂಡಿಹಾಳ, ಬಿನ್ನಾಳ, ಯರೆಹಂಚಿನಾಳದವರು ರೋಗಿಗಳನ್ನು ಕರೆತರಲು ತೊಂದರೆಯಾಗಿತ್ತು. ಸರಕಾರಿ ಸಾರಿಗೆ ಸ್ಥಗಿತಗೊಂಡಿದ್ದರಿಂದ ಖಾಸಗಿ ವಾಹನಗಳಿಗೆ ಶುಕ್ರದೆಸೆ ಒದಗಿತ್ತು.



ಈ ಕುರಿತು ಪ್ರತಿಕ್ರಿಯಿಸಿದ ಗದಗ ಸಾರಿಗೆ ಡಿ.ಸಿ ದೇವರಾಜು, ಕಳೆದ ಮೂರು ದಿನಗಳ ಹಿಂದೆಯೇ ಆರ್‌ಟಿಒರವರು ಸಭೆ ಕರೆದು ಮುಷ್ಕರದ ದಿನ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಿದ್ದರು. ನಮ್ಮ ನೌಕರರೂ ಸಹ ಕೆಲಸಕ್ಕೆ ಹಾಜರಾಗುವುದಾಗಿ ತಿಳಿಸಿದ್ದರು. ಆದರೂ ಅವರು ಕೆಲಸಕ್ಕೆ ಬಾರದಿರುವುದರಿಂದ ಪ್ರಯಾಣಿಕರಿಗೆ ತೊಂದರೆಯಾಗಿದೆ. ಸಾಧ್ಯವಾದ ಕಡೆಗಳಲ್ಲಿ ಪ್ರಯಾಣಿಕರಿಗೆ ತೊಂದರೆಯಾಗದಂತೆ ಖಾಸಗಿ ವಾಹನಗಳ ವ್ಯವಸ್ಥೆ ಮಾಡಲಾಗಿದೆ ಎಂದರು. ನಿವೃತ್ತ ಸೈನಿಕರ ಸಂಘ ನರೇಗಲ್ಲದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಪ್ರತಿಕ್ರಿಯಿಸಿ, ಸರಕಾರದ ಧೋರಣೆ, ಸಾರಿಗೆ ನೌಕರರ ಬೇಡಿಕೆ ಅದೇನೇ ಇದ್ದರೂ, ಮೊದಲು ಸಮಸ್ಯೆ ಪರಿಹಾರಕ್ಕೆ ಸರಕಾರ ಮುಂದಾಗಬೇಕು. ರಾಜ್ಯಾದ್ಯಂತ ಲಕ್ಷಾಂತರ ಜನರಿಗೆ, ವಿದ್ಯಾರ್ಥಿಗಳಿಗೆ ಈ ಸಾರಿಗೆ ಮುಷ್ಕರದಿಂದ ತೊಂದರೆಯಾಗಿದೆ ಎಂಬುದು ಒಂದೇ ದಿನದಲ್ಲಿ ಸರಕಾರಕ್ಕೆ ಅರ್ಥವಾಗಿರಬಹುದು ಎಂದರು.

# ಪೂರ್ವಭಾವಿ ಸಭೆ ಆ.9ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಲಿಂಗಾಯತ ಕುಡುಒಕ್ಕಲಿಗರ ಸಂಘದ ವತಿಯಿಂದ ಆಗಸ್ಟ್ 9ರಂದು ಬೆಳಿಗ್ಗೆ 11.30ಕ್ಕೆ ಕುಡುಒಕ್ಕಲಿಗರ ಭವನದಲ್ಲಿ ದಾನವೀರ ಶ್ರೀಲಿಂಗರಾಜ ದೇಸಾಯಿಯವರ ಪುಣ್ಯತಿಥಿ ಅಂಗವಾಗಿ ಪ್ರತಿಭಾ ಪುರಸ್ಕಾರ, 5 ಮಾಜಿ ಸೈನಿಕರಿಗೆ ಸನ್ಮಾನ ಹಾಗೂ ವಾರ್ಷಿಕ ಮಹಾಸಭೆ ನಿಮಿತ್ತ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ.

ಸಮಾಜ ಬಂಧುಗಳು, ಹಿರಿಯರು, ಯುವಕರು, ಸದಸ್ಯರು, ಸಂಘದ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸುವಂತೆ ಪ್ರಕಟಣೆ ವಿನಂತಿಸಿದೆ.

# ಸರ್ಕಾರದ ಖಜಾನೆ ತುಂಬಿದೆ ಅಂತಿದ್ರಿ, ನೌಕರರ ಪ್ರಾಬ್ಲಮ್ ಅರ್ಥ ಆಗ್ತಿಲ್ವಾ? - ಆರಗ ಜ್ಞಾನೇಂದ್ರ ಕಿಡಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಖಜಾನೆ ತುಂಬಿರೋ ಸರ್ಕಾರಕ್ಕೆ ಸಾರಿಗೆ ನೌಕರರ ಸಮಸ್ಯೆ ಪರಿಹರಿಸಲು ಕಷ್ಟ ಯಾಕೆ? ಎಂದು ಸಚಿವ ಆರಗ ಜ್ಞಾನೇಂದ್ರ ಹೇಳಿದ್ದಾರೆ. ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಸಾರಿಗೆ ನೌಕರರ ಜೊತೆ ಸರ್ಕಾರ ಮಾತುಕತೆ ನಡೆಸುವಲ್ಲಿ ವಿಫಲವಾಗಿದೆ.

ಹಿಂದೆ ಯಡಿಯೂರಪ್ಪ ಇದ್ದಾಗ ಇದೇ ಸಿದ್ದರಾಮಯ್ಯ ನಮಗೆ ಪ್ರಶ್ನೆ ಮಾಡಿದ್ರು. ಸಾರಿಗೆ ನೌಕರರ ಮೇಲೆ ಎಸ್ಮಾ ಹಾಕಿ ಹೆದರಿಸಿದ್ರು. ನಿನ್ನ ಕುರ್ಚಿ ಎಷ್ಟು ಶಾಶ್ವತ ಎಂದು ತಿಳಿದುಕೊಂಡಿದ್ದೀಯಾ ಅಂತಾ ಸಿದ್ದರಾಮಯ್ಯ ಪ್ರಶ್ನೆ ಮಾಡಿದ್ದರು. ಈಗ ನಾನು ಸಿದ್ದರಾಮಯ್ಯಗೆ ಪ್ರಶ್ನೆ ಮಾಡ್ತೇನಿ.ನೀವು ಎಷ್ಟು ದಿನ ಅಧಿಕಾರದಲ್ಲಿ ಇರುತ್ತೀರಾ ಎಂದುಕೊಂಡಿದ್ದೀರಾ ಎಂದು ಪ್ರಶ್ನಿಸಿದ್ದಾರೆ.

ನೀವು ಫ್ರೀ ಅಂತಾ ನೌಕರರಿಗೆ ಸಂಬಳವನ್ನೇ ಕೊಡುತ್ತಿಲ್ಲ. ನೌಕರರನ್ನು ಕರೆದು ಮಾತಾಡಿ ಸಮಸ್ಯೆ ಬಗೆಹರಿಸಬೇಕಿತ್ತು. ಇದರಿಂದ ಜನರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಸಮಸ್ಯೆ ಅನುಭವಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಹಾಲುಮತ (ಕುರುಬ) ಸಮಾಜದ 7ನೇ ರಾಜ್ಯಮಟ್ಟದ ವಧು-ವರರ ಸಮಾವೇಶ

# ಸಮಾವೇಶದಿಂದ ಹಣ, ಸಮಯದ ಉಳಿತಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಕುರುಬ ಸಮಾಜದಲ್ಲಿ ವಧು-ವರರ ಅನ್ವೇಷಣೆ ಇಂದು ಕಷ್ಟದಾಯಕವಾಗಿರುವದರಿಂದ ಇಂತಹ ಸಮಾವೇಶದಿಂದ ಪಾಲಕರಿಗೆ ಒಂದೇ ವೇದಿಕೆಯಲ್ಲಿ ಹಲವಾರು ಅವಕಾಶಗಳು ಲಭ್ಯವಾಗಿ, ಹಣ ಮತ್ತು ಸಮಯದ ಉಳಿತಾಯವಾಗಲಿದೆ ಎಂದು ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕಿರಪ್ಪ ಹೆಬಸೂರ ಹೇಳಿದರು.

ನಗರದ ಶ್ರೀ ಕನಕ ಭವನದಲ್ಲಿ ಹಾಲುಮತ ಮಹಾಸಭಾ ಗದಗ ಜಿಲ್ಲಾ ಘಟಕ ಹಾಗೂ ಕುರುಬರ ಸಂಘ ಜಿಲ್ಲಾ ಘಟಕ ಇವರ ಸಹಯೋಗದಲ್ಲಿ ಜರುಗಿದ 7ನೇ ರಾಜ್ಯಮಟ್ಟದ ವಧು-ವರರ ಸಮಾವೇಶದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಮಾತನಾಡಿ, ವಧುವಿಗೆ ವರ ಹಾಗೂ ವರನಿಗೆ ವಧುವಿನ ಆಯ್ಕೆ ಬದುಕಿನ ಪ್ರಮುಖ ಘಟ್ಟವಾಗಿದೆ. ಇದರಿಂದ ಪಾಲಕರಿಗೆ ಅನುಕೂಲವಾಗಲೆಂದು 7ನೇ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಈ ಸಮಾವೇಶದಲ್ಲಿ ಕುರಿಗಾರರಿಂದ ಹಿಡಿದು ಉನ್ನತ ಅಧಿಕಾರಿಗಳವರೆಗೆ ವಧು-ವರರ ಆಯ್ಕೆಗಾಗಿ ಆಗಮಿಸಿದ್ದಾರೆ. ಈ ಕಾರ್ಯಕ್ರಮದ ಯಶಸ್ವಿಗೆ ಸಮಾಜದ ಗುರು-ಹಿರಿಯರ ಕೊಡುಗೆ ಸಾಕಷ್ಟಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ, ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ಡಾ. ಬಿ.ಎಫ್. ದಂಡಿನ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಸ್ಲಂ ಬೋರ್ಡ್‌ನ ರಾಜ್ಯ ನಿರ್ದೇಶಕ ರಾಮಕೃಷ್ಣ ರೊಳ್ಳಿ ಅವರನ್ನು ಸನ್ಮಾನಿಸಲಾಯಿತು.

ಸಮಾವೇಶದಲ್ಲಿ ಮಹಾರಾಷ್ಟ್ರ, ಬೆಂಗಳೂರು, ಹಾವೇರಿ, ಬೆಳಗಾವಿ, ವಿಜಯಪುರ, ಬಾಗಲಕೊಟ, ಚಾಮರಾಜನಗರ, ದಾವಣಗೇರಿ, ಕಾರವಾರ, ಕೊಪ್ಪಳ, ಬಳ್ಳಾರಿ, ಹೊಸಪೇಟೆ, ಹುಬ್ಬಳ್ಳಿ-ಧಾರವಾಡ, ತುಮಕೂರ ಸೇರಿದಂತೆ ಗದಗ ಜಿಲ್ಲೆಯ ವಿವಿಧ ಭಾಗಗಳಿಂದ 156ಕ್ಕೂ ಹೆಚ್ಚು ವಧು-ವರರು ಆಗಮಿಸಿದ್ದರು.

ವೇದಿಕೆಯ ಮೇಲೆ ಹುಲ್ಲೂರು ಅಮೋಘಿಮಠದ ಪೂಜ್ಯಶ್ರೀ ಸಿದ್ದಯ್ಯ ಸ್ವಾಮಿಗಳು, ವೈ.ಡಿ. ಜಡದೆಲಿ, ಕುರುಬರ ಸಂಘದ ತಾಲೂಕಾಧ್ಯಕ್ಷ ನಾಗಪ್ಪ ಗುಗ್ಗರಿ, ಹಾಲುಮತ ಮಹಾಸಭಾದ ರಾಜ್ಯ ಉಪಾಧ್ಯಕ್ಷರಾದ ಸುವರ್ಣ ನಾಗರಾಳ, ಉಮಾ ದ್ಯಾವನೂರ, ಹಾಲಪ್ಪ ಹೊಂಬಳ, ಜಿಲ್ಲಾ ಗೌರವಾಧ್ಯಕ್ಷ ನಾಗರಾಜ ಮೆಣಸಗಿ, ಜಿಲ್ಲಾಧ್ಯಕ್ಷ ಬಸವರಾಜ ನೀಲಗಾರ, ಸೋಮನಗೌಡ ಪಾಟೀಲ, ಮುತ್ತು ಜಡಿ, ರಾಘು ವಗ್ಗನವರ, ಸತೀಶ ಗಿಡ್ಡಹನುಮಣ್ಣವರ, ಕುಮಾರ ಮಾರನಬಸರಿ, ಮಲ್ಲೇಶ ಬಿಂಗಿ ಮುಂತಾದವರು ಉಪಸ್ಥಿತರಿದ್ದರು.

ಶಿಲ್ಪಾ, ಸೌಮ್ಯಾ ಹಾಗೂ ಸಂಜನಾ ಪ್ರಾರ್ಥಿಸಿದರು. ಮೋಹನ ಇಮರಾಪೂರ ಕಾರ್ಯಕ್ರಮ ನಿರೂಪಿಸಿದರು.



ನಿವೃತ್ತ ಪೊಲೀಸ್ ಅಧಿಕಾರಿ ಡಿ.ಡಿ. ಮಾಳಗಿ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿ, ಈ ಸಮಾವೇಶ ಕೌಟುಂಬಿಕ ಕಾರ್ಯಕ್ರಮವಾಗಿದೆ. ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಗದಗ ಜಿಲ್ಲೆಯಲ್ಲಿ ಸಮಾಜ ಬಾಂಧವರು ವಧು-ವರರಿಗೆ ಉಡಿ ತುಂಬುವ ಮೂಲಕ ಗೌರವಿಸುತ್ತಿರುವದು ಹೆಮ್ಮೆಯ ಸಂಗತಿಯಾಗಿದೆ. ನಮ್ಮಲ್ಲಿ ಉಪ ಪಂಗಡಗಳಲ್ಲಿ ತಾರತಮ್ಯವಿದೆ. ಅದೇರೀತಿ ಬೇರೆ ಸಮುದಾಯದಲ್ಲಿ ಉಪ ಪಂಗಡಗಳನ್ನು ಮರೆತು ಒಂದಾಗುತ್ತಿರುವ ಸಮಯದಲ್ಲಿ ನಾವು ಕೂಡಾ ತಾರತಮ್ಯ ಮರೆತು ನಾವೆಲ್ಲರೂ ಕುರುಬರು ಎಂದು ಸಮಾಜವನ್ನು ಗಟ್ಟಿಗೊಳಿಸಬೇಕು ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka